ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೧೦೬**

# ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಸೋಮವಾರ, ದಿನಾಂಕ : ೨೯ನೇ ಜೂನ್, ೨೦೧೫**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಬೆಳಗಾವಿ ಗ್ರಾಮೀಣ ಸಾರಿಗೆ ಸಮಸ್ಯೆಗಳು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧ (೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶದ ಜನರು ಪ್ರತಿದಿನ ಉದ್ಯೋಗ, ಶಿಕ್ಷಣ, ಆಸ್ಪತ್ರೆ, ಇತ್ಯಾದಿ ಎಲ್ಲಾ ಮೂಲ ಸೌಕರ್ಯಗಳಿಗಾಗಿ ಬೆಳಗಾವಿಗೆ ಬಂದು ಹೋಗಲು ಸಾರಿಗೆ ವ್ಯವಸ್ಥೆಯು ಕೊರತೆಯಿಂದಾಗಿ ತುಂಬಾ ತೊಂದರೆ ಅನುಭವಿಸುತ್ತಿದ್ದು ಇದರ ನಿವಾರಣೆಗೆ ಸರ್ಕಾರ ಕೂಡಲೇ ಕೈಗೊಳ್ಳುವ ಕ್ರಮಗಳು ಯಾವುವು ;

(ಆ) ಸಾರಿಗೆ ಇಲಾಖೆಯ ಬಸ್ಸುಗಳಿಲ್ಲದಿರುವುದರಿಂದ ಜನರನ್ನು ಖಾಸಗಿ ವಾಹನಗಳಲ್ಲಿ, ಟಂಟಂ ಲಗೇಜು ವಾಹನಗಳಲ್ಲಿ ಭರ್ತಿ ತುಂಬಿಕೊಂಡು ಓಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಖಾಸಗಿ ವಾಹನಗಳ ನಿಯಂತ್ರಣಕ್ಕಾಗಿ ಕೈಗೊಂಡಿರುವ ಕ್ರಮಗಳೇನು ;

(ಇ) ಬೆಳಗಾವಿ ನಗರ ಸಾರಿಗೆ ರಾತ್ರಿ ೧೦.೦೦ ಗಂಟೆಗೆ ಮುಕ್ತಾಯಗೊಳಿಸುತ್ತಿದ್ದು, ಎರಡನೇ ಪಾಳಿ ಮತ್ತು ಆ ವೇಳೆಗಳಲ್ಲಿ ಕೆಲಸ ಮಾಡುವ ಜನ (ಮಹಿಳೆಯರು ಒಳಗೊಂಡಂತೆ) ರಾತ್ರಿ ಸಂಚರಿಸಲು ತೀವ್ರ ತೊಂದರೆಗೆ ಒಳಗಾಗಿರುವುದರಿಂದ ಸರ್ಕಾರ ರಾತ್ರಿ ಸೇವೆ ವಿಸ್ತರಣೆಗೆ ಕ್ರಮ ಕೈಗೊಳ್ಳುವುದೇ ;

(ಈ) ಬೆಳಗಾವಿ ಜಿಲ್ಲೆಯ ಗ್ರಾಮೀಣ ಭಾಗದ ಬಹುತೇಕ ಬಸ್ ನಿಲ್ದಾಣಗಳಲ್ಲಿ ಶೆಲ್ಟರ್ ಇಲ್ಲದೆ, ಮಹಿಳೆಯರು ತೀವ್ರ ತೊಂದರೆ



ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಉ) ನರ್ಮ್ ಯೋಜನೆಯಡಿ ಬೆಳಗಾವಿ ನಗರದಲ್ಲಿ ಹೊಸ ಬಸ್ಸುಗಳನ್ನು ಓಡಿಸಲಾಗುವುದೆಂದು ಸರ್ಕಾರ ಈ ಹಿಂದೆ ಭರವಸೆ ನೀಡಿದ್ದು, ಈವರೆಗೂ ಹೊಸ ಬಸ್ಸುಗಳನ್ನು ಒದಗಿಸದಿರುವುದು ನಿಜವೇ ; ಹಾಗಿದ್ದಲ್ಲಿ ಹೊಸ ಬಸ್ಸುಗಳನ್ನು ಯಾವಾಗಿನಿಂದ ಒದಗಿಸಲಾಗುವುದು ;

(ಊ) ಬೆಳಗಾವಿ ನಗರದಲ್ಲಿ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣ ಮಾಡುವ ಪ್ರಸ್ತಾವಗಳು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಪ್ರಸ್ತಾವಗಳ ರೂಪುರೇಷಗಳೇನು ; ಸದರಿ ನಿಲ್ದಾಣಗಳನ್ನು ಯಾವ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ? (ವಿವರ ಒದಗಿಸುವು)

## ಸ್ನಾತಕೋತ್ತರದ ಪರೀಕ್ಷೆಯ ಅವ್ಯವಹಾರಗಳ ಬಗ್ಗೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೨ (೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ೨೦೧೧ರ ವೈದ್ಯಕೀಯ ಸ್ನಾತಕೋತ್ತರ ಮತ್ತು ದಂತ ವೈದ್ಯಕೀಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಬದಲಿಸಿದ ಸಂಬಂಧ ಸರ್ಕಾರ ಯಾವ ಸಂಸ್ಥೆಯಿಂದ ತನಿಖೆ ನಡೆಸಲು ಸೂಚಿಸಿದೆ ತನಿಖಾ ಪ್ರಗತಿಯ ವಿವರಗಳನ್ನು ನೀಡುವುದು ;

(ಆ) ಯಾವ ಯಾವ ಶಿಕ್ಷಣ ಸಂಸ್ಥೆಯ ಅಧೀನ ವೈದ್ಯಕೀಯ ಕಾಲೇಜಿನಲ್ಲಿ ಈ ಹಗರಣಗಳು ನಡೆದಿವೆ ಸದರಿ ಸಂಸ್ಥೆವಾರು ಗಣ್ಯರ ಹೆಸರುಗಳ ವಿವರ ಒದಗಿಸುವುದು ?

## ಬೆಳಗಾವಿಯಲ್ಲಿ ಐಟಿ/ಬಿಟಿ ಕಂಪನಿಗಳನ್ನು ಸ್ಥಾಪಿಸುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩ (೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯ ವಿವಿಧ ಕಾಲೇಜುಗಳಿಂದ ಪ್ರತಿ ವರ್ಷ ಹೊರಬರುತ್ತಿರುವ IT ವಿದ್ಯಾರ್ಥಿಗಳು ಉದ್ಯೋಗಕ್ಕಾಗಿ, ಸಿಲಿಕಾನ್ ಸಿಟಿ ಎಂದು ಖ್ಯಾತಿ ಗಳಿಸಿರುವ ಬೆಂಗಳೂರಿಗೆ ಹೊರ ರಾಜ್ಯ ಅಥವಾ ಹೊರ ರಾಷ್ಟ್ರಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಬೆಳಗಾವಿ ನಗರದಲ್ಲಿ ಅತೀ ಹೆಚ್ಚಿನ IT/BT ಕಂಪನಿಗಳನ್ನು ಸರ್ಕಾರದಿಂದ ಮತ್ತು ಖಾಸಗಿಯವರಿಂದ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ಹಾಗಿದ್ದಲ್ಲಿ ಅವಧಿಯೊಳಗೆ ಕ್ರಮ ಕೈಗೊಳ್ಳಲಾಗುವುದೇ ?

## ಗಂಗಾ ಕಲ್ಯಾಣ ಯೋಜನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪ (೧೩೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆ, ಅಂಬೇಡ್ಕರ್ ನಿಗಮದಿಂದ ಕಳೆದ ೩ ವರ್ಷಗಳಲ್ಲಿ ಮಂಜೂರಾದ "ಗಂಗಾ ಕಲ್ಯಾಣ ಯೋಜನೆ" ಕೊಳವೆ ಬಾವಿ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)



(ಆ) ಸದರಿ ಯೋಜನೆಯು ಅಸಮರ್ಪಕವಾಗಿ, ಉದ್ದೇಶರಹಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಗಂಗಾ ಕಲ್ಯಾಣ ಯೋಜನೆಯ ಪ್ರಗತಿಯ ಬಗ್ಗೆ ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಇ) ಮಂಜೂರಾದ ಕೊಳವೆ ಬಾವಿಗಳಿಗೆ ಇದುವರೆಗೆ ವಿದ್ಯುತ್ ಸಂಪರ್ಕ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಸ್ಟಾಫ್ ನರ್ಸ್

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫ (೧೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಒಟ್ಟು ಎಷ್ಟು ಮಂದಿ ಗುತ್ತಿಗೆ ಆಧಾರದಲ್ಲಿ ಸ್ಟಾಫ್ ನರ್ಸ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಸಂಖ್ಯೆ ಮತ್ತು ಹೆಸರುಗಳ ಸಹಿತ ಜಿಲ್ಲಾವಾರು ವಿವರ ನೀಡುವುದು)

(ಆ) ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುವ ಎಲ್ಲಾ ಸ್ಟಾಫ್ ನರ್ಸ್‌ಗಳಿಗೆ ಸಮಾನ ವೇತನ ನೀಡಲಾಗುತ್ತಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುವ ಸ್ಟಾಫ್ ನರ್ಸ್‌ಗಳಿಗೆ ನಿಗದಿಪಡಿಸಿದ ವೇತನ ಎಷ್ಟು ; ಯಾವ ಲೆಕ್ಕ ಶೀರ್ಷಿಕೆಯಿಂದ ವೇತನ ಪಾವತಿಯಾಗುತ್ತಿದೆ ;

(ಈ) ಕನಿಷ್ಠ ವೇತನಕ್ಕಿಂತ ಕಡಿಮೆ ವೇತನ ಪಾವತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಗುತ್ತಿಗೆ ಆಧಾರ ಸ್ಟಾಫ್ ನರ್ಸ್‌ಗಳನ್ನು ಖಾಯಂ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ನೀಡುವುದು)

## ಆರೋಗ್ಯ ಇಲಾಖೆಯಿಂದ ಸಂಜಯಗಾಂಧಿ ನರ್ಸಿಂಗ್ ಕಾಲೇಜಿನ ಶುಶ್ರೂಷಕರ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬ (೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಿಂದ ಬೆಂಗಳೂರಿನ ಸಂಜಯಗಾಂಧಿ ನರ್ಸಿಂಗ್ ಕಾಲೇಜಿಗೆ ಉಪನ್ಯಾಸಕರಾಗಿ ನಿಯೋಜನೆ ಮೇರೆಗೆ ನೇಮಕಗೊಂಡಿರುವ ಶುಶ್ರೂಷಕರುಗಳ ಸಂಖ್ಯೆ ಎಷ್ಟು ; (ಹಾಗೂ ಪೂರ್ಣ ವಿವರ ಒದಗಿಸುವುದು)

(ಆ) ಸದರಿ ಶುಶ್ರೂಷಕರುಗಳು ಯಾವ ದಿನಾಂಕದಿಂದ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದಾರೆ ; ಇವರ ನಿಯೋಜನಾ ಅವಧಿಯು ಯಾವಾಗ ಮುಕ್ತಾಯಗೊಂಡಿದೆ ; (ವಿವರ ಒದಗಿಸುವುದು)

(ಇ) ನಿಯೋಜನೆ ಅವಧಿ ಮುಗಿದಿರುವ ಶುಶ್ರೂಷಕರ ಸೇವೆಯನ್ನು ಸಂಜಯಗಾಂಧಿ ನರ್ಸಿಂಗ್ ಕಾಲೇಜಿನಿಂದ ವಾಪಸ್ಸು ಪಡೆದು ಮಾತೃ ಇಲಾಖೆಯಾದ ಆರೋಗ್ಯ ಇಲಾಖೆಯಲ್ಲಿನ ವಿವಿಧ



ಆಸ್ಪತ್ರೆಗಳಿಗೆ ನೇಮಕ ಮಾಡಲು ಸರ್ಕಾರಕ್ಕಿರುವ ತೊಂದರೆ ಏನು ; ಹಾಗಿದ್ದಲ್ಲಿ, ಈ ಬಗ್ಗೆ ಯಾವಾಗ ಆದೇಶ ಹೊರಡಿಸಿ, ನರ್ಸಿಂಗ್ ಕಾಲೇಜಿನ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು ? (ವಿವರ ಒದಗಿಸುವುದು)

## ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ಕಾಯ್ದೆಯ ಅನುಷ್ಠಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭ (೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ಅಧಿಕಾರಿಗಳ/ನೌಕರರುಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯಲ್ಲಿನ ಹಲವಾರು ಲೋಪದೋಷಗಳ ಬಗ್ಗೆ ಯಾರು ದೂರುಗಳನ್ನು ದಾಖಲಾಗಿದೆಯೊ ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಈ ಲೋಪದೋಷ ಹಾಗೂ ಗೊಂದಲಗಳಿಗೆ ಕಾರಣರಾದ ಅಧಿಕಾರಿ ನೌಕರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ; (ದೂರುದಾರರ ಹೆಸರಿನೊಂದಿಗೆ ವಿವರ ಒದಗಿಸುವುದು)

(ಆ) ಆರೋಗ್ಯ ಇಲಾಖೆಯಲ್ಲಿ ಜಾರಿಯಲ್ಲಿರುವಂತೆ ಆಹಾರ ಸುರಕ್ಷತಾ ವಿಭಾಗಕ್ಕೂ ಕೌನ್ಸಲಿಂಗ್ ಪದ್ಧತಿಯನ್ನು ಜಾರಿಗೊಳಿಸಲಾಗುವುದೇ ; ಹಾಗಿದ್ದಲ್ಲಿ ಯಾವಾಗಿನಿಂದ ಜಾರಿಗೊಳಿಸಲಾಗುವುದು ; ಅಲ್ಲಿಯವರೆಗೆ ಆಹಾರ ವಿಶ್ಲೇಷಕರ ಪದೋನ್ನತಿ ಪ್ರಕ್ರಿಯೆಯೂ ಸೇರಿದಂತೆ ಎಲ್ಲಾ ವಿಧವಾದ ಪದೋನ್ನತಿ/ನೇಮಕಾತಿಗಳನ್ನು ಮುಂದೂಡಲಾಗುವುದೇ ; (ವಿವರ ಒದಗಿಸುವುದು)

(ಇ) ಆರೋಗ್ಯ ಇಲಾಖೆಯಲ್ಲಿ "ಬಯೋಮೆಟ್ರಿಕ್ ಹಾಜರಾತಿ" ಪದ್ಧತಿ ಜಾರಿಯಲ್ಲಿದ್ದು ಬೆಂಗಳೂರಿನ ಕೊಳಚೆ ನಿರ್ಮೂಲನ ಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಹಾರ ಸುರಕ್ಷತಾ ವಿಭಾಗದ ಎಲ್ಲಾ ಕಛೇರಿಗಳು ಸೇರಿದಂತೆ ರಾಜ್ಯಾದ್ಯಂತ ಆಹಾರ ಸುರಕ್ಷತಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ನೌಕರರುಗಳಿಗೆ/ಅಧಿಕಾರಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಪದ್ಧತಿಯನ್ನು ಜಾರಿಗೊಳಿಸಲು ಇರುವ ತೊಂದರೆಗಳೇನು ; ಹಾಗಿದ್ದಲ್ಲಿ, ಯಾವಾಗ ಜಾರಿಗೊಳಿಸಲಾಗುವುದು ;

(ಈ) ಕಳಪೆ ಸಾಧನೆ ತೋರಿರುವ ಆಹಾರ ಸುರಕ್ಷತಾ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ವಿಫಲರಾಗಿರುವ ಸಂಬಂಧಪಟ್ಟ ಮೇಲಾಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ; (ವಿವರ ಒದಗಿಸುವುದು)

(ಉ) ಆಹಾರ ಸುರಕ್ಷತಾ ಕಾಯಿದೆ ಜಾರಿ ಸಂಬಂಧ ಘನ ನ್ಯಾಯಾಲಯಗಳಲ್ಲಿ ಪ್ರಕರಣಗಳು ಎಷ್ಟು ಸಮಯದಿಂದ ಬಾಕಿ ಇದೆ ? (ವಿವರ ಒದಗಿಸುವುದು)

## ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು ಸ್ಥಾಪನೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮ (೧೩೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು ಸ್ಥಾಪನೆ ಮಾಡುವುದಾಗಿ ಬಜೆಟ್‌ನಲ್ಲಿ ಭರವಸೆ ನೀಡಿದ್ದರೂ, ಇಲ್ಲಿಯವರೆಗೆ ಉಡುಪಿ ಜಿಲ್ಲೆಗೆ ಮೆಡಿಕಲ್ ಕಾಲೇಜು ಮಂಜೂರು ಮಾಡದಿರಲು ಕಾರಣವೇನು ;



(ಆ) ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜು ಸ್ಥಾಪನೆಗೆ ಇರುವ ತೊಡಕುಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈಗಾಗಲೇ ಯಾವ–ಯಾವ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಈಗಾಗಲೇ ನೀಡಿರುವ ಭರವಸೆಯಂತೆ ಉಡುಪಿಯಲ್ಲಿ ಯಾವಾಗ ಸರ್ಕಾರಿ ಮೆಡಿಕಲ್ ಕಾಲೇಜನ್ನು ಸ್ಥಾಪಿಸಲಾಗುವುದು ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಆಟೋರಿಕ್ಷಾಗಳಿಗೆ ಡಿಜಿಟಲ್ ಮೀಟರ್ ಅಳವಡಿಸುವ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯ (೧೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಇರುವ ಒಟ್ಟು ಆಟೋರಿಕ್ಷಾಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಈವರೆಗೆ ಎಷ್ಟು ಆಟೋರಿಕ್ಷಾಗಳಿಗೆ ಡಿಜಿಟಲ್ ಮೀಟರ್ ಅಳವಡಿಸಲಾಗಿದೆ ; ಇಲ್ಲವಾದಲ್ಲಿ ಕಾರಣಗಳೇನು ;

(ಇ) ಈವರೆಗೆ ಡಿಜಿಟಲ್ ಮೀಟರ್ ಅಳವಡಿಸಲು ಬಿಡುಗಡೆಯಾದ ಸಬ್ಸಿಡಿ ಹಣವೆಷ್ಟು ;

(ಈ) ಸಬ್ಸಿಡಿ ಹಣಕ್ಕೆ ಅರ್ಜಿ ಸಲ್ಲಿಸಿದ್ದರೂ ಹಣ ಬಿಡುಗಡೆ ಮಾಡಲು ಅನಾವಶ್ಯಕವಾಗಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸಬ್ಸಿಡಿ ಹಣ ಬಿಡುಗಡೆಗೆ ಸರ್ಕಾರ ಏನು ಕ್ರಮ ಕೈಗೊಳ್ಳುವುದು ?

## ಮ್ಯಾಗಿ ನೂಡಲ್ಸ್‌ನಲ್ಲಿ ರಾಸಾಯನಿಕ ಪ್ರಮಾಣದ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೦ (೧೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮ್ಯಾಗಿ ನೂಡಲ್ಸ್‌ನಲ್ಲಿ ಮೋನೋ ಸೋಡಿಯಂ ಗ್ಲುಟಮೇಟ್, ಸೀಸ ಹಾಗೂ ಅರ್ಸೆನಿಕ್ ರಾಸಾಯನಿಕಗಳು ನಿಗದಿತ ಪ್ರಮಾಣಕ್ಕಿಂತ ಹೆಚ್ಚು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಸಂಸ್ಕರಿತ ಆಹಾರ ಪದಾರ್ಥಗಳನ್ನು ಮಾರುವ ಸಂದರ್ಭದಲ್ಲಿ ಅವುಗಳಲ್ಲಿರುವ ಹಾನಿಕರ ಅಂಶಗಳನ್ನು ಪತ್ತೆ ಹಚ್ಚಲು ರಾಜ್ಯದಲ್ಲಿ ವ್ಯವಸ್ಥೆಗಳು ಯಾವುವು ;

(ಇ) ಜನಸಾಮಾನ್ಯರು ಬಳಸುತ್ತಿರುವ ಈ ರೀತಿ ಆಹಾರ ಪದಾರ್ಥಗಳು, ಹಣ್ಣು ಹಂಪಲುಗಳು, ತಂಪು ಪಾನೀಯಗಳು ಹಾಲು, ಮೊಟ್ಟೆ, ಮಾಂಸ ಹಾಗೂ ನೀರು ಮುಂತಾದವುಗಳನ್ನು ಕಾಲಕಾಲಕ್ಕೆ ಪರೀಕ್ಷೆ ಮಾಡಲು ಮತ್ತು ಅವುಗಳ ಗುಣಮಟ್ಟವನ್ನು ದೃಢೀಕರಿಸಲು ಸರ್ಕಾರ ಯಾವ ಮುಂಜಾಗೃತ ವ್ಯವಸ್ಥೆಯನ್ನು ಅನುಸರಿಸುತ್ತಿದೆ ; (ವಿವರ ನೀಡುವುದು)

(ಈ) ಈ ರೀತಿಯ ಆಹಾರ ವಸ್ತುಗಳನ್ನು ಮಾರಾಟ ಮಾಡಲು ಸರಿಯಾದ ಮಾಹಿತಿ ನೀಡದ ಅತಿ ರಂಜಿತವಾಗಿ ಮಾಧ್ಯಮಗಳ ಮೂಲಕ ಹಾಗೂ ಭಿತ್ತಿ ಫಲಕಗಳ ಜಾಹೀರಾತು ಮೂಲಕ ಮುಗ್ಧ ಜನರನ್ನು ದಾರಿ ತಪ್ಪಿಸುವುದರ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ ?



## ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಕ್ಯಾಂಪಸ್‌ನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೧ (೧೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯವನ್ನು ಶಾಶ್ವತವಾಗಿ ಒಂದು ಹೊಸ ಆವರಣಕ್ಕೆ ಸ್ಥಳಾಂತರಿಸಲು ಈ ಹಿಂದೆಯೇ ನಿರ್ಣಯ ಕೈಗೊಂಡಿದ್ದರು ಈವರೆಗೆ ಕಾರ್ಯಗತವಾಗದಿರಲು ಕಾರಣಗಳೇನು ;

(ಆ) ಈ ವಿಶ್ವವಿದ್ಯಾಲಯ ಸ್ಥಾಪನೆಗೆ ಎಷ್ಟು ಎಕರೆ ಭೂಮಿಯನ್ನು ವಶಪಡಿಸಿಕೊಳ್ಳಲು ನಿರ್ಧರಿಸಲಾಗಿದೆ ಈವರೆಗೆ ಎಷ್ಟು ಎಕರೆ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ ;

(ಇ) ಇನ್ನುಳಿದ ಭೂಮಿಯನ್ನು ಯಾವ ಕಾಲಮಿತಿಯೊಳಗೆ ವಶಪಡಿಸಿಕೊಳ್ಳಲಾಗುವುದು ;

(ಈ) ಈಗಾಗಲೇ ವಿಶ್ವವಿದ್ಯಾಲಯ ಪ್ರಾರಂಭವಾಗಿ ಅನೇಕ ವರ್ಷಗಳು ಕಳೆದಿರುವುದರಿಂದ ಯಾವ ಕಾಲಮಿತಿಯಲ್ಲಿ ವಿಶ್ವವಿದ್ಯಾಲಯದ ಹೊಸ ಕ್ಯಾಂಪಸ್‌ನ್ನು ಪ್ರಾರಂಭಿಸಲು ಯೋಚಿಸಿದೆ ?

## ಸರ್ಕಾರಿ ವಸತಿ ಶಾಲೆಗಳಲ್ಲಿ ಪಿ.ಯು.ಸಿ.ವರೆಗೆ ವಿದ್ಯಾಭ್ಯಾಸ ವಿಸ್ತರಿಸುವ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೨ (೧೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಡ ವಿದ್ಯಾರ್ಥಿಗಳ ಶಿಕ್ಷಣ ಮೊಟಕಾಗದಂತೆ ನೋಡಿಕೊಳ್ಳುವ ದೃಷ್ಟಿಯಿಂದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಸೇರಿ

ರಾಜ್ಯದ ಎಲ್ಲಾ ಸರ್ಕಾರಿ ವಸತಿ ಶಾಲೆಗಳಲ್ಲಿ ದ್ವಿತೀಯ ಪಿ.ಯು.ಸಿ. ವರೆಗೆ ವಿದ್ಯಾಭ್ಯಾಸ ವಿಸ್ತರಿಸಲು ಸರ್ಕಾರ ಯೋಚಿಸಿದೆಯೇ ;

(ಆ) ಈ ಯೋಜನೆಯನ್ನು ಎಷ್ಟು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; ಈ ಯೋಜನೆಯು ರಾಜ್ಯದಲ್ಲಿರುವ ಎಲ್ಲ ವಸತಿ ಶಾಲೆಗಳಿಗೆ ಅನ್ವಯಿಸಲಾಗುವುದೇ ;

(ಇ) ಈ ಸೌಲಭ್ಯ ವಿಸ್ತರಣೆಯಿಂದ ವಿದ್ಯಾರ್ಥಿಗಳಿಗೆ ಬೇಕಾಗುವ ಹೆಚ್ಚಿನ ಕೊಠಡಿ ಮತ್ತು ಸಿಬ್ಬಂದಿಗಳ ಅವಶ್ಯಕತೆಗಳನ್ನು ಪೂರೈಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಇದಕ್ಕೆ ನಿಗಧಿಪಡಿಸಿರುವ ಕಾಲಮಿತಿ ಏನು ?

## ಉಡುಪಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಹಾಸ್ಟೆಲ್‌ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩ (೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿನ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಅವಕಾಶ ಕಲ್ಪಿಸಲು ಇರುವ ಸೀಟುಗಳ ಸಂಖ್ಯೆ ಎಷ್ಟು ; (ತಾಲ್ಲೂಕು ವಿದ್ಯಾರ್ಥಿನಿಲಯವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿನ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ, ವಿದ್ಯಾರ್ಥಿನಿ ನಿಲಯಗಳಲ್ಲಿ ಕಳೆದ ಸಾಲಿನಲ್ಲಿ ಅವಕಾಶ ಕೋರಿಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಅವಕಾಶ ಕಲ್ಪಿಸುವ ಅರ್ಜಿಗಳ ಸಂಖ್ಯೆ ಎಷ್ಟು ; ಅವಕಾಶ ಕಲ್ಪಿಸಲಾಗದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಸ್ಟೆಲ್‌ವಾರು ವಿವರ ನೀಡುವುದು)



(ಇ) ಸದರಿ ವಿದ್ಯಾರ್ಥಿನಿಲಯಗಳಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ತಾಲ್ಲೂಕುವಾರು, ಹಾಸ್ಟೆಲ್‌ವಾರು, ಹುದ್ದೆವಾರು ವಿವರ ನೀಡುವುದು)

## ರಾಜ್ಯದಲ್ಲಿನ ಆಹಾರ ಪರಿವೀಕ್ಷಕರು ಅಳತೆ ಮತ್ತು ಮಾಪನಾಧಿಕಾರಿಗಳ ಹುದ್ದೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪ (೨೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಹಾರ ಪರಿವೀಕ್ಷಕರ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಸದರಿ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಳತೆ ಮತ್ತು ಮಾಪಕ ಪರಿವೀಕ್ಷಕರ ಸಂಖ್ಯೆ ಎಷ್ಟು ; ಕೊರತೆ ಇರುವ ಅಳತೆ ಮತ್ತು ಮಾಪಕ ಪರಿವೀಕ್ಷಕರ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಆಹಾರ ಪದಾರ್ಥಗಳ ಗುಣಮಟ್ಟವನ್ನು ಪರೀಕ್ಷಿಸಲು ಇರುವ ಪ್ರಯೋಗಾಲಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಈ) ಪ್ರಯೋಗಾಲಯಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಕೊರತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಪ್ರಯೋಗಾಲಯವಾರು ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿ ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫ (೨೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರ, ಕೇಂದ್ರವಾರು ವಿವರ ನೀಡುವುದು)

(ಆ) ಸದರಿ ಆರೋಗ್ಯ ಕೇಂದ್ರಗಳಿಗೆ ಮಂಜೂರಾದ ವಿವಿಧ ದರ್ಜೆಯ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆ ಇರುವ ವಿವಿಧ ದರ್ಜೆಯ ಹುದ್ದೆಗಳ ಸಂಖ್ಯೆ ಎಷ್ಟು ; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ತಾಲ್ಲೂಕುವಾರು, ಕೇಂದ್ರವಾರು, ಹುದ್ದೆವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕಿನ ನಕ್ಸಲ್ ಪ್ರಭಾವಿತ ಪ್ರದೇಶವಾದ ಅಮವಾಸೆಬೈಲಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಕಾರಣವೇನು ?



## ನೆಸ್ಲೆ ಕಂಪನಿ ಉತ್ಪಾದಿತ ಮ್ಯಾಗಿ ನ್ಯೂಡಲ್ಸ್‌ನ ಗುಣಮಟ್ಟದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬ (೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆಸ್ಲೆ ಕಂಪನಿ ಉತ್ಪಾದಿತ ಮ್ಯಾಗಿ ನ್ಯೂಡಲ್ಸ್‌ನ ಗುಣಮಟ್ಟದ ಕುರಿತು ದೇಶದ ಬಹುರಾಜ್ಯಗಳಲ್ಲಿ ಗುಣಮಟ್ಟ ಪರೀಕ್ಷಿಸಲ್ಪಟ್ಟಿದ್ದು ಅದರ ಫಲಿತಾಂಶದ ವರದಿ ಸರ್ಕಾರದ ಗಮನದಲ್ಲಿದೆಯೇ ; (ಇದ್ದಲ್ಲಿ ರಾಜ್ಯವಾರು ವರದಿಯ ಮಾಹಿತಿ ಒದಗಿಸುವುದು)

(ಆ) ನೆಸ್ಲೆ ಕಂಪನಿ ಉತ್ಪಾದಿತ ಮ್ಯಾಗಿ ನ್ಯೂಡನ್ಸ್‌ನ ಗುಣಮಟ್ಟವನ್ನು ಕರ್ನಾಟಕದಲ್ಲಿ ಪರೀಕ್ಷಿಸಲಾಗಿದೆಯೇ ; ಪರೀಕ್ಷಿಸಿದಲ್ಲಿ, ಫಲಿತಾಂಶವೇನು ; (ಗುಣಮಟ್ಟದ ಫಲಿತಾಂಶದ ವರದಿಯ ಪ್ರತಿ ಒದಗಿಸುವುದು)

(ಇ) ನೆಸ್ಲೆ ಕಂಪನಿ ಉತ್ಪಾದಿತ ಮ್ಯಾಗಿ ನ್ಯೂಡಲ್ಸ್‌ನ ಪೊಟ್ಟಣಗಳನ್ನು ಮಾರಾಟ ಮಳಿಗೆಗಳಿಂದ ವಾಪಸು ಪಡೆಯಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ?

## ಡೆಂಗ್ಯೂ ಜ್ವರದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭ (೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ವರ್ಷ ಡೆಂಗ್ಯೂ ಜ್ವರಕ್ಕೆ ಗುರಿಯಾದ ಜನರ ಸಂಖ್ಯೆ ಎಷ್ಟು ; ಅವರುಗಳಿಗೆ ಯಾವ ಯಾವ ಆಸ್ಪತ್ರೆಗಳಲ್ಲಿ ಚಿಕಿತ್ಸೆಯನ್ನು ನೀಡಲಾಗಿದೆ ; ಆ ಪೈಕಿ ಗುಣಮುಖ ಹೊಂದಿದ ಮತ್ತು ಸಾವನ್ನಪ್ಪಿದ ರೋಗಿಗಳ ಸಂಖ್ಯೆ ಎಷ್ಟು ;

(ಆ) ಡೆಂಗ್ಯೂ ಜ್ವರ ಬರಲು ಕಾರಣವೇನು ; ಡೆಂಗ್ಯೂ ಜ್ವರಕ್ಕೆ ನೀಡಲಾಗುವ ಚಿಕಿತ್ಸೆಗಳಿಗೆ ಸರ್ಕಾರದ ಆಸ್ಪತ್ರೆಗಳಲ್ಲಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಮತ್ತು ನರ್ಸಿಂಗ್ ಹೋಮ್‌ಗಳಲ್ಲಿ ತಗಲುವ ವೆಚ್ಚವನ್ನು ತಾಲ್ಲೂಕುವಾರು ವಿವರಗಳನ್ನು ನೀಡುವುದು ;

(ಇ) ದುಬಾರಿಯಾದ ಚಿಕಿತ್ಸಾ ವೆಚ್ಚವನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಪದವೀಧರ ವಿದ್ಯಾರ್ಥಿಗಳ ಹಾಸ್ಟೆಲ್

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮ (೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ಪದವೀಧರರ ವಿದ್ಯಾರ್ಥಿಗಳ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ;

(ಆ) ಈ ಹಾಸ್ಟೆಲ್‌ಗಳನ್ನು ಯಾವ ಯಾವ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ ;

(ಇ) ಇವುಗಳಿಗೆ ಸುವ್ಯವಸ್ಥಿತ ಕಟ್ಟಡಗಳನ್ನು ಕಟ್ಟಿಸಲಾಗಿದೆಯೇ ?

## ನಕಲಿ ಜಾತಿ ಪ್ರಮಾಣ ಪತ್ರದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯ (೨೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಕಲಿ ಜಾತಿ ಪ್ರಮಾಣ ಪತ್ರ ಪಡೆದಿರುವ ಬಗ್ಗೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪ್ರಕರಣವಾರು, ಆರೋಪಿ ಹಾಗೂ ದೂರುದಾರರ ವಿವರ ಒದಗಿಸುವುದು)



(ಆ) ಆ ಪೈಕಿ ಎಷ್ಟು ಪ್ರಕರಣಗಳಲ್ಲಿ ಆರೋಪ ಸಾಬೀತಾಗಿದೆ ; ಎಷ್ಟು ಪ್ರಕರಣಗಳು ತನಿಖಾ ಹಂತದಲ್ಲಿ ಬಾಕಿ ಇದೆ ; ಇದಕ್ಕೆ ಕಾರಣಗಳೇನು ;

(ಇ) ನಕಲಿ ಜಾತಿ ಪ್ರಮಾಣ ಪಡೆದವರ ಮೇಲೆ ಇಲಾಖೆ ಅಥವಾ ಪ್ರಾಧಿಕಾರಗಳು ತೆಗೆದುಕೊಂಡ ಕ್ರಮದ ಬಗ್ಗೆ ವರದಿ ನೀಡಿದ್ದಾರೆಯೇ ; ಹಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡಿರುವ ಕ್ರಮಗಳಾವುವು ?

## ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ/ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ/ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮಗಳ ವತಿಯಿಂದ ಕೊರೆದ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ ಮತ್ತು ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦ (೬೭+೬೯+೮೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ/ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ/ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ೨೦೧೨–೧೩, ೨೦೧೩–೧೪ ಹಾಗೂ ೨೦೧೪–೧೫ ರಲ್ಲಿ ಕೊರೆಯಲು ನಿಗದಿಪಡಿಸಿದ ಕೊಳವೆ ಬಾವಿಗಳೆಷ್ಟು ; ಹಾಗೂ ಸದರಿ ಸಾಲುಗಳಲ್ಲಿ ಕೊರೆದ ಕೊಳವೆ ಬಾವಿಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಯಾವ ಯಾವ ಕೊಳವೆ ಬಾವಿಗಳಲ್ಲಿ ಎಷ್ಟು ಅಡಿ ಅಳದವರೆಗೆ ನೀರಿನ ಪ್ರಮಾಣವಿರುತ್ತದೆ ; ಎಷ್ಟು ಅಡಿ ಕೇಸಿಂಗ್ ಪೈಪ್ ಅಳವಡಿಸಲಾಗಿದೆ ;

(ಇ) ಎಲ್ಲಾ ಕೊಳವೆ ಬಾವಿಗಳಿಗೆ ಪಂಪಸೆಟ್ ಒದಗಿಸಲಾಗಿದೆಯೇ ; ಇಲ್ಲವಾದಲ್ಲಿ ಯಾವ ಕಾಲಮಿತಿಯೊಳಗೆ ಪಂಪಸೆಟ್ ಅಳವಡಿಸಲಾಗುವುದು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಈ) ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ಹಾಗೂ ವಿದ್ಯುತ್ ಸಂಪರ್ಕ ಒದಗಿಸದೇ ಬಾಕಿ ಉಳಿದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಧಾರ್ಮಿಕ ಕೇಂದ್ರಗಳಿಗೆ ಬಳಕೆ ಮಾಡುವ ಬಗ್ಗೆ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೧ (೭೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಧಾರ್ಮಿಕ ಕೇಂದ್ರಗಳಿಗೆ ಬಳಕೆ ಮಾಡಲು ಅವಕಾಶ ಇದೆಯೇ. ಇದ್ದರೆ ಎಷ್ಟು ಮೊತ್ತವನ್ನು ಬಳಕೆ ಮಾಡಲು ಅವಕಾಶ ಇದೆ ಯಾವ ಯಾವ ಉದ್ದೇಶಗಳಿಗಾಗಿ ಬಳಕೆ ಮಾಡಲು ಅವಕಾಶವಿದೆ ;

(ಆ) ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಬಳಕೆಗೆ ಇರುವ ಮಾನದಂಡನೆಗಳೇನು ;



(ಇ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಯಾವ ಯಾವ ಇಲಾಖೆಗಳಿಗೆ ನೀಡಲು ಅವಕಾಶ ಇದೆ ?

## ರಾಜ್ಯದಲ್ಲಿರುವ ಕಾಂಟ್ರಕ್ಟ್ ಕ್ಯಾರೇಜ್ ಬಸ್ಸುಗಳ ಸಂಖ್ಯೆ ಬಗ್ಗೆ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೨ (೭೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಾಂಟ್ರಕ್ಟ್ ಕ್ಯಾರೇಜ್ ಬಸ್ಸುಗಳ ಸಂಖ್ಯೆ ಎಷ್ಟು ; ಯಾವ ಯಾವ ಜಿಲ್ಲೆಗಳಲ್ಲಿ ಕಾಂಟ್ರಕ್ಟ್ ಕ್ಯಾರೇಜ್ ಬಸ್ಸುಗಳಿಗೆ ಪರವಾನಿಗೆ ನೀಡಲಾಗಿದೆ ; ಪರವಾನಿಗೆ ಮೂಲಕ ರಾಜ್ಯದ ಸಾರಿಗೆ ಇಲಾಖೆಗೆ ಬರುವ ಆದಾಯ ಎಷ್ಟು ; ನರ್ಮ್ ಯೋಜನೆಯಡಿಯಲ್ಲಿ ಖರೀದಿಸಿದ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ಉಡುಪಿ ಜಿಲ್ಲೆಗೆ ನೀಡಿದ ಬಸ್ಸು ಎಷ್ಟು ; ಯಾವ ಯಾವ ಮಾನದಂಡದ ಮೇಲೆ ಈ ಬಸ್ಸುಗಳನ್ನು ವಿತರಿಸಲಾಗಿದೆ ; (ವಿವರ ನೀಡುವುದು)

(ಇ) ಮಂಗಳೂರು–ಮಣಿಪಾಲ ಮಧ್ಯೆ ಓಡಾಡುವ ಬಸ್ಸುಗಳ ಸಂಖ್ಯೆ ಎಷ್ಟು ; ನಿರೀಕ್ಷಿಸಿದ ಆದಾಯ ಎಷ್ಟು ; ಪ್ರಸ್ತುತ ಬರುತ್ತಿರುವ ಆದಾಯ ಎಷ್ಟು ;

(ಈ) ಮಂಗಳೂರು–ಪುತ್ತೂರು–ಬಂಟ್ವಾಳ–ಸುಳ್ಯ–ಮೂಡಬಿದ್ರೆ ಪಟ್ಟಣಗಳಿಗೆ ವೋಲ್ವೊ ಎಕ್ಸ್‌ಪ್ರೆಸ್ ಬಸ್ಸುಗಳನ್ನು ಓಡಾಡಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದರೆ ಯಾವ ಹಂತದಲ್ಲಿದೆ ;

(ಉ) ಉಡುಪಿ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಖಾಸಗಿ ಸರ್ವೀಸ್, ಖಾಸಗಿ ಸಿಟಿ ಬಸ್ಸುಗಳ ಸಂಖ್ಯೆ ಎಷ್ಟು ?

## ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮೆರಿಟ್ ಆಧಾರದಲ್ಲಿ ಎಂ.ಬಿ.ಬಿ.ಎಸ್. ಪದವಿ ಬಗ್ಗೆ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೩ (೭೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮೆರಿಟ್ ಆಧಾರದಲ್ಲಿ ಎಂ.ಬಿ.ಬಿ.ಎಸ್. ಪದವಿ ಪಡೆಯಲು ಒರ್ವ ವಿದ್ಯಾರ್ಥಿಗೆ ತಗಲುವ ಖರ್ಚು ಎಷ್ಟು ;

(ಆ) ರಾಜ್ಯದಲ್ಲಿ ೨೦೧೩–೧೪ನೇ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಸೀಟುಗಳನ್ನು ನೀಡಲಾಗಿದೆ ;

(ಇ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಉನ್ನತ ಶಿಕ್ಷಣ (Post Graduation) ಲಭ್ಯವಿರುವ ಸೀಟುಗಳ ಸಂಖ್ಯೆ ಎಷ್ಟು ; ಮತ್ತು ಪ್ರತಿ ವಿದ್ಯಾರ್ಥಿಗೆ ಸರ್ಕಾರ ಖರ್ಚು ಮಾಡುವ ವೆಚ್ಚ ಎಷ್ಟು ;

(ಈ) ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯಕೀಯ ಶಿಕ್ಷಕರ ಸಂಖ್ಯೆ ಎಷ್ಟು ; ಖಾಲಿಯಿರುವ ವೈದ್ಯರ ಹುದ್ದೆಗಳು ಎಷ್ಟು ?

## ಮಾನವ ದೇಹಕ್ಕೆ ಅಪಾಯಕಾರಿ ಬ್ಯಾಕ್ಟೀರಿಯಾಗಳಲ್ಲಿ ಎಂ.ಆರ್.ಎಸ್.ಇ. ರೋಗಗಳ ಬಗ್ಗೆ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೪ (೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಎಂ.ಆರ್.ಎಸ್.ಇ. ರೋಗಕ್ಕೆ ಪೀಡಿತರಾಗಿರುವ ರೋಗಿಗಳ ಸಂಖ್ಯೆ ಎಷ್ಟು ; ಈ ರೋಗವನ್ನು ತಡೆಗಟ್ಟಲು



ಮತ್ತು ಹರಡದಂತೆ ಎಚ್ಚರ ವಹಿಸಲು ಇಲಾಖೆ ತೆಗೆದುಕೊಂಡ ಕ್ರಮಗಳೇನು ;

(ಆ) ಮಂಗಳೂರು ನರ್ಸಿಂಗ್ ವಿದ್ಯಾರ್ಥಿಗಳು ಮಾನವ ದೇಹಕ್ಕೆ ಅಪಾಯಕಾರಿ ಬ್ಯಾಕ್ಟೀರಿಯಾಗಳಲ್ಲಿ ಎಂ.ಆರ್.ಎಸ್.ಇ. ರೋಗ ಇದ್ದು ಮಂಗಳೂರಿನ ನರ್ಸಿಂಗ್ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದು, ಈ ಬಗ್ಗೆ ಆರೋಗ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ; ಈ ರೋಗದ ವಿರುದ್ಧ ಪ್ರತಿಭಟನೆ ನಡೆಸಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಎಂ.ಆರ್.ಎಸ್.ಇ. ಬ್ಯಾಕ್ಟೀರಿಯಾ ರೋಗಾಣುವನ್ನು ಪತ್ತೆ ಹಚ್ಚಲು ರಾಜ್ಯದಲ್ಲಿ ಎಷ್ಟು ಪ್ರಯೋಗಾಲಯವನ್ನು ಸ್ಥಾಪಿಸಲಾಗಿದೆ ;

(ಈ) ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯಕೀಯ ಶಿಕ್ಷಕರ ಸಂಖ್ಯೆ ಎಷ್ಟು ?

## ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಯಲ್ಲಿ ಇತ್ಯರ್ಥ ಪಡಿಸಲು ಬಾಕಿ ಇರುವ ಪ್ರಕರಣಗಳ ಬಗ್ಗೆ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫ (೭೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಯಲ್ಲಿ ಇತ್ಯರ್ಥಪಡಿಸಲು ಬಾಕಿ ಇರುವ ಪ್ರಕರಣಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಗ್ರಾಹಕರ ಪರಿಹಾರ ವೇದಿಕೆಯ ಅಧ್ಯಕ್ಷರು ಮತ್ತು ಸದಸ್ಯರುಗಳ ಖಾಲಿ ಇರುವ ಹುದ್ದೆಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಗ್ರಾಹಕರ ವೇದಿಕೆಯ ಅಧ್ಯಕ್ಷರನ್ನು ನೇಮಕ ಮಾಡುವಾಗ ಅರ್ಹ ವಕೀಲರುಗಳನ್ನು ನೇಮಕ ಮಾಡಲು ಇಲಾಖೆ ಕ್ರಮ ಕೈಗೊಳ್ಳುವುದೇ ;

(ಈ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ನಗರದಲ್ಲಿ ಹೆಚ್ಚುವರಿ ಪರಿಹಾರ ವೇದಿಕೆ ನ್ಯಾಯಾಲಯವನ್ನು ನೀಡಬೇಕೆಂದು ಬೇಡಿಕೆಗೆ ಸರ್ಕಾರ ಸ್ಪಂದಿಸುವುದೇ ?

## ಬೀದರ್ ಜಿಲ್ಲೆಯಲ್ಲಿ ವಸತಿ ನಿಲಯಗಳ ದುರಸ್ಥಿ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೬ (೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೨೦–೨೫ ವರ್ಷಗಳ ಹಿಂದೆ ನಿರ್ಮಾಣಗೊಂಡ ವಸತಿ ನಿಲಯಗಳೆಷ್ಟು ; ಅವುಗಳ ಈಗಿನ ಪರಿಸ್ಥಿತಿ ಏನು ; (ವಿಧಾನ ಸಭಾ ಕ್ಷೇತ್ರವಾರು ವಸತಿ ನಿಲಯಗಳ ಮಾಹಿತಿ ನೀಡುವುದು)

(ಆ) ಈ ವಸತಿ ನಿಲಯುಗಳಿಗೂ ಆಗಿನ ವ್ಯವಸ್ಥೆಗೆ ತಕ್ಕಂತೆ ನಿರ್ಮಾಣಗೊಂಡಿದ್ದು ೨–೪ ಕೊಠಡಿಗಳಿದ್ದು ; ಈಗಿನ ಕಟ್ಟಡಗಳ ವಿನ್ಯಾಸ ಮತ್ತು ವ್ಯವಸ್ಥೆಯಲ್ಲಿ ವ್ಯತ್ಯಾಸವೇನಾದರೂ ಇದೆಯೇ ;



(ಇ) ಸದರಿ ವಸತಿ ನಿಲಯಗಳಲ್ಲಿ ಸಮರ್ಪಕವಾದ ಕುಡಿಯುವ ನೀರು, ಶೌಚಾಲಯ ಮತ್ತು ಇತರೆ ಸಾಮಾನ್ಯ ಕೊರತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸದರಿ ಕೊರತೆಗಳನ್ನು ನೀಗಿಸಲು ಸರ್ಕಾರದಿಂದ ಏನು ಕ್ರಮ ಕೈಗೊಳ್ಳಲಾಗಿದೇ ? (ವಿವರ ಒದಗಿಸುವುದು)

## ಖಾಸಗಿ ಉದ್ಯೋಗಿಗಳನ್ನು ಕೆಲಸದಿಂದ ತೆಗೆದುಹಾಕುತ್ತಿರುವುದು.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೭ (೭೬) ಮಾನ್ಯ ಯೋಜನೆ ಹಾಗೂ ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಸಗಿ ಮಾಹಿತಿ ತಂತ್ರಜ್ಞಾನ ವಹಿವಾಟಿನ ಕಂಪನಿಗಳ ಸಂಖ್ಯೆ ಎಷ್ಟು ; (ವಿಳಾಸವಾರು ವಿವರ ನೀಡುವುದು)

(ಆ) ಕೆಲ ಕಂಪನಿಗಳು ಉದ್ಯೋಗಿಗಳಿಗೆ ಸರಿಯಾದ ಕಾರಣಗಳನ್ನು ನೀಡದೆ ಅವರನ್ನು ಕೆಲಸದಿಂದ ತೆಗೆದು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರವು ಅಂತಹ ಕಂಪನಿಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ;

(ಈ) ಉದ್ಯೋಗ ಕಳೆದುಕೊಂಡ ಬಡ ಜನರು ಬಹುತೇಕ ನಮ್ಮ ರಾಜ್ಯದವರಾಗಿದ್ದು ಬದಲಿ ಉದ್ಯೋಗ ದೊರಕದೆ ನಿರುದ್ಯೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ; ಕೆಲಸ ಕಳೆದುಕೊಂಡ ವಿದ್ಯಾವಂತರ ರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಬಗ್ಗೆ.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೮ (೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಕಳೆದ ೨ ವರ್ಷಗಳಿಂದ ಘೋಷಿಸಿರುವಂತೆ ರಾಜ್ಯದ ಎಷ್ಟು ತಾಲ್ಲೂಕುಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲಾಗಿದೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಬೀದರ್ ಜಿಲ್ಲೆಯ ಯಾವ ಯಾವ ತಾಲ್ಲೂಕು ಕೇಂದ್ರಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲಾಗಿದೆ ; (ವಿಧಾನ ಸಭಾವಾರು ವಿವರ ನೀಡುವುದು)

(ಇ) ತೆರೆದಿದ್ದಲ್ಲಿ, ಡಯಾಲಿಸಿಸ್ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನು ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ವಸತಿ ನಿಲಯಗಳಿಗೆ ಆಹಾರ ಸರಬರಾಜು ಮಾಡುವುದು.

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೯ (೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಸ್.ಸಿ./ಎಸ್.ಟಿ.,ಮೊರಾರ್ಜಿ ಕಿತ್ತೂರರಾಣಿ ಚೆನ್ನಮ್ಮ ಮತ್ತು ಬಿ.ಸಿ.ಎಮ್. ಒಟ್ಟು ಎಷ್ಟು ವಸತಿ ನಿಲಯಗಳಿವೆ. (ತಾಲ್ಲೂಕುವಾರು ವಿವರ ನೀಡುವುದು)



(ಆ) ೨೦೦೫ ರಿಂದ ೨೦೧೫ರ ವರೆಗೆ ವಸತಿ ನಿಲಯಗಳಿಗೆ ಆಹಾರ ಸರಬರಾಜು ಮಾಡಲು ಟೆಂಡರ್ ಪ್ರಕ್ರಿಯೆ ನಡೆಸಲಾಗಿದೆಯೆ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಟೆಂಡರ್ ಪ್ರಕ್ರಿಯೆ ನಡೆದಿದ್ದಲ್ಲಿ ದಿನಾಂಕ ಮತ್ತು ಟೆಂಡರ್ ನೀಡಿದ ಗುತ್ತಿಗೆದಾರರ ವಿವರ ನೀಡುವುದು ;

(ಈ) ಟೆಂಡರ್ ಪಡೆದ ಗುತ್ತಿಗೆದಾರರು ಸರಿಯಾಗಿ ಆಹಾರ ಸರಬರಾಜು ಮಾಡದೆ ಇರುವಂತಹ ಗುತ್ತಿಗೆದಾರರ ವಿರುದ್ಧ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ವಿದ್ಯಾಸಿರಿ ಯೋಜನೆ ಅಡಿಯಲ್ಲಿ ವಿದ್ಯಾರ್ಥಿಗಳಿಗೆ ನೀಡಿರುವ ಸೌಲಭ್ಯದ ಬಗ್ಗೆ.

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)** :–

೩೦ (೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:

(ಅ) ವಿದ್ಯಾಸಿರಿ ಯೋಜನೆ ಅಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಎಷ್ಟು ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ನೀಡಲಾಗಿದೆ ವರ್ಗಾವಾರು ಮಾಹಿತಿ ನೀಡುವುದು

(ಆ) ಈ ಸೌಲಭ್ಯಕ್ಕೆ ಕಳೆದ ಮೂರು ವರ್ಷಗಳಲ್ಲಿ ನಿಗಧಿಪಡಿಸಿದ ಹಣ ಎಷ್ಟು ಖರ್ಚಾದ ಹಣ ಎಷ್ಟು ?

## ವಿದೇಶ ಶಿಕ್ಷಣ ಸೌಲಭ್ಯದ ಕುರಿತು:

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೧ (೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ವಿದೇಶ ಶಿಕ್ಷಣ ಸೌಲಭ್ಯದ ಅಡಿಯಲ್ಲಿ ಯಾವ ಯಾವ ಕೋರ್ಸ್‌ಗಳಿಗೆ ಎಷ್ಟೆಷ್ಟು ವಿದ್ಯಾರ್ಥಿಗಳನ್ನು ಕಳುಹಿಸಲಾಗಿದೆ ;

(ಆ) ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಗೆ ಯಾವ ಮಾನದಂಡವನ್ನು ಅನುಸರಿಸಲಾಗಿದೆ ; ಈ ಅವಧಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಎಷ್ಟು ಮಕ್ಕಳನ್ನು ವಿದೇಶ ವ್ಯಾಸಂಗಕ್ಕೆ ಕಳುಹಿಸಲಾಗಿದೆ ; ಪ್ರತಿ ವಿದ್ಯಾರ್ಥಿಗೂ ಖರ್ಚು ಮಾಡಿದ ಹಣ ಎಷ್ಟು ;

(ಇ) ಈ ಮೂರು ವರ್ಷಗಳಲ್ಲಿ ಈ ಯೋಜನೆಗೆ ಸರ್ಕಾರ ನಿಗದಿಪಡಿಸಿದ ಹಣ ಎಷ್ಟು ; ಖರ್ಚು ಮಾಡಲಾದ ಹಣ ಎಷ್ಟು ?

## ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಿಗೆ ಖರೀದಿಸಿರುವ ಬೆಡ್‌ಗಳ ಕುರಿತು.

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೩೨ (೮೩) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಖರೀದಿಸಲಾದ ಬೆಡ್‌ಗಳು ಮತ್ತು ಮಂಚಗಳ ಸಂಖ್ಯೆ ಎಷ್ಟು ; ಯಾವ ಯಾವ ಏಜೆನ್ಸಿಯ ಮುಖಾಂತರ ಹಾಸಿಗೆ, ದಿಂಬು, ಮತ್ತು ಬೆಡ್‌ಶೀಟ್‌ಗಳನ್ನು ಯಾವ ಯಾವ ದರದಲ್ಲಿ ಖರೀದಿಸಲಾಗಿದೆ ; (ಪ್ರತ್ಯೇಕ ವಿವರ ನೀಡುವುದು)



(ಆ) ಖರೀದಿಯಲ್ಲಿನ ಅವ್ಯವಹಾರದ ಹಗರಣಗಳ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ೨೦೧೫–೧೬ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ MCI ವತಿಯಿಂದ ಅನುಮತಿ ಪಡೆದ ಮೆಡಿಕಲ್ ಕಾಲೇಜು ಕುರಿತು.

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೩೩ (೮೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಶೈಕ್ಷಣಿಕ ವರ್ಷದಿಂದ ಹೊಸದಾಗಿ ಎಷ್ಟು ಮತ್ತು ಎಲ್ಲಿ ಮೆಡಿಕಲ್ ಕಾಲೇಜುಗಳನ್ನು ಪ್ರಾರಂಭ ಮಾಡಲು MCI ನವದೆಹಲಿ ಅನುಮತಿ ನೀಡಿದೆ ;

(ಆ) ಹೊಸದಾಗಿ ಪ್ರಾರಂಭವಾಗುವ ಪ್ರತಿ ಕಾಲೇಜುಗಳಲ್ಲಿ ಈಗಾಗಲೇ ಎಷ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಸೃಜಿಸಲಾಗಿದೆ ; ಆ ಪೈಕಿ ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) MCI ನವದೆಹಲಿ ಇವರು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡಿರುವ ಕಾಲೇಜುಗಳಿಗೆ, ಮರು ತಪಾಸಣೆಗೆ ದಿನಾಂಕವನ್ನು ನಿಗದಿಪಡಿಸಿದ್ದಾರೆಯೇ ;

(ಈ) ಮರು ತಪಾಸಣೆಗೆ ಬಂದಲ್ಲಿ ಮೂಲಭೂತ ಸೌಕರ್ಯಗಳನ್ನು ಪೂರೈಸಲು MCI ಹಾಕಿದ ಕರಾರುಗಳನ್ನು ಪೂರೈಸಲಾಗಿದೆಯೇ ? (ವಿವರ ನೀಡುವುದು)

## ಮೊರಾರ್ಜಿ ವಸತಿ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿ ಕುರಿತು.

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೩೪ (೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:

(ಅ) ರಾಜ್ಯದ ಮೊರಾರ್ಜಿ ವಸತಿ ಶಾಲೆಯಲ್ಲಿ ಕಳೆದ ೪–೫ ವರ್ಷಗಳಿಂದ ಚಿತ್ರಕಲಾ ಶಿಕ್ಷಕರ ನೇಮಕಾತಿಯಲ್ಲಿ ಆಗಿರುವ ಸಮಸ್ಯೆಗಳಾವುವು ;

(ಆ) ನೇಮಕಾತಿ ಆದೇಶ ಹೊರಡಿಸುವಲ್ಲಿ ವಿಳಂಬವಾಗಲು ಕಾರಣಗಳೇನು ;

(ಇ) ಈ ಶಿಕ್ಷಕರಿಗೆ ಯಾವಾಗ ನೇಮಕಾತಿ ಆದೇಶಗಳನ್ನು ಹೊರಡಿಸಲಾಗುವುದು ?

## ರಾಜ್ಯದಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ / ಹೊಂದಿರದ ವಿಜ್ಞಾನ ಕೇಂದ್ರಗಳ ಕುರಿತು.

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೩೫ (೮೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ವಿಜ್ಞಾನ ಕೇಂದ್ರಗಳು ಸ್ಥಾಪನೆಯಾಗಿ ಸ್ವಂತ ಕಟ್ಟಡವನ್ನು ಹೊಂದಿವೆ ; (ವಿವರ ನೀಡುವುದು)



(ಆ) ೨೦೧೫–೧೬ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಜಿಲ್ಲೆಗಳಲ್ಲಿ ವಿಜ್ಞಾನ ಕೇಂದ್ರದ ಕಟ್ಟಡ ನಿರ್ಮಾಣ ಮಾಡಲು ನಿರ್ಣಯಿಸಲಾಗಿದೆ ; ಮತ್ತು ಪ್ರತಿ ವಿಜ್ಞಾನ ಕೇಂದ್ರಕ್ಕೆ ಮೀಸಲಾಗಿಟ್ಟ ಅನುದಾನ ಎಷ್ಟು ; ಹಾಗಿದ್ದಲ್ಲಿ ; ಎಷ್ಟು ಜಿಲ್ಲೆಗಳಲ್ಲಿ ಹೊಸದಾಗಿ ಕಟ್ಟಡ ಕಟ್ಟುವ ಕಾಮಗಾರಿ ಪ್ರಾರಂಭಿಸಲಾಗಿದೆ ; (ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯಲ್ಲಿ ವಿಜ್ಞಾನ ಕೇಂದ್ರ ಸ್ಥಾಪಿಸಲು ಕಟ್ಟಡಕ್ಕಾಗಿ ಈಗಾಗಲೇ ಅನುದಾನವನ್ನು ಬಿಡುಗಡೆ ಮಾಡಿದೆಯೇ ; ಮಾಡಿದ್ದಲ್ಲಿ ಎಷ್ಟು ಮತ್ತು ಯಾವಾಗ ಬಿಡುಗಡೆ ಮಾಡಲಾಗಿದೆ ?

## ವಿಜಯಾಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ನೂತನ ಸರಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಕುರಿತು.

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೬ (೯೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿ ಜಿಲ್ಲೆಗೊಂದು ಹೊಸ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಸರ್ಕಾರದ ನೀತಿಯಂತೆ ವಿಜಯಾಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಯಾವಾಗ ಸ್ಥಾಪಿಸಲಾಗುವುದು ;

(ಆ) ಈಗಾಗಲೇ ಯಾವ ಯಾವ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳು ಪ್ರಾರಂಭವಾಗಿವೆ ; ಎಷ್ಟು ಜಿಲ್ಲೆಗಳಲ್ಲಿ ನಿರ್ಮಾಣದ ಹಂತದಲ್ಲಿವೆ ; ಎಲ್ಲೆಲ್ಲಿ ಮೂಲಭೂತ ಸೌಕರ್ಯವನ್ನು ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಹೊಸ ವೈದ್ಯಕೀಯು ಕಾಲೇಜುಗಳನ್ನು ಪ್ರಾರಂಭಿಸಲು ಆದ್ಯತೆ ನೀಡುವಾಗ ಗಮನಿಸತಕ್ಕ ಮಾನದಂಡಗಳೇನು ; (ವಿವರ ನೀಡುವುದು)

## ವಿಜಾಪುರ ಮತ್ತು ಬಾಗಲಕೋಟೆ ಜಿಲ್ಲೆಯ ಆಯುಷ ಇಲಾಖೆ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭ (೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಲ್ಲಿರುವ ಆಯುಷ ಆಸ್ಪತ್ರೆಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಸಹಾಯಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಯುನಾನಿ ಚಿಕಿತ್ಸಾಲಯ ನಿರ್ವಹಣೆ, ಔಷಧಿ ಸರಬರಾಜು ಇತ್ಯಾದಿಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಪ್ರತಿ ಜಿಲ್ಲೆ ಹಾಗೂ ತಾಲ್ಲೂಕುವಾರು ವಿವರ ನೀಡುವುದು ?

## ಬಾಗಲಕೋಟೆ ಜಿಲ್ಲೆಯಲ್ಲಿ ಹೊಸ ಬಸ್ ನಿಲ್ದಾಣ ನಿರ್ಮಾಣದ ಕುರಿತು.

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮ (೯೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ನಗರದ ಹಳೆಯ ಬಸ್ ನಿಲ್ದಾಣದಲ್ಲಿ ಹೊಸ ಕಟ್ಟಡ ನಿರ್ಮಾಣ ಕಾರ್ಯ ಮತ್ತು ಬಾಗಲಕೋಟೆ ನವನಗರದ ಬಸ್ ನಿಲ್ದಾಣದ ಕಟ್ಟಡಗಳ ನಿವರ್ಾಣ ಕಾರ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣ ಏನು ; (ವಿವರ ನೀಡುವುದು)



(ಆ) ಕಟ್ಟಡಗಳಿಗೆ ಪ್ರತ್ಯೇಕವಾಗಿ ತಗಲುವ ವೆಚ್ಚ ಎಷ್ಟು ; ಕೆಲಸದ ಗುತ್ತಿಗೆಯನ್ನು ಯಾರಿಗೆ ನೀಡಲಾಗಿದೆ ; ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ;

(ಇ) ಬಾಗಲಕೋಟೆ ಜಿಲ್ಲೆಯ ಜಮಖಂಡಿ ಮತ್ತು ಮುಧೋಳ ಬಸ್ ನಿಲ್ದಾಣದ ಹಳೆ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದು, ಹೊಸ ಕಟ್ಟಡ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಬಯಲುಸೀಮೆ ಹಾಗೂ ಮಲೆನಾಡು ಅಭಿವೃದ್ಧಿ ಪ್ರಾಧಿಕಾರ ಯೋಜನೆ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೯ (೯೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದ ಮೂಲಕ ವಿಜಯಾಪುರ ಮತ್ತು ಬಾಗಲಕೋಟೆ ಅವಳಿ ಜಿಲ್ಲೆಗಳಿಗೆ ಒದಗಿಸಿದ ಹಣ ಎಷ್ಟು ;

(ಆ) ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ ;

(ಇ) ವಿಜಯಾಪುರ ಮತ್ತು ಬಾಗಲಕೋಟೆ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳು ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದ ಕಾರ್ಯವ್ಯಾಪ್ತಿಗೆ ಒಳಪಡುತ್ತವೆ ? (ವಿವರ ನೀಡುವುದು)

## ವಿಜಾಪುರ ಮತ್ತು ಬಾಗಲಕೋಟ ಜಿಲ್ಲೆಗಳಲ್ಲಿ, ಅಂಬೇಡ್ಕರ್ ಭವನ ಮತ್ತು ಜಗಜೀವನರಾಮ ಭವನಗಳನ್ನು ನಿರ್ಮಿಸುವ ಕುರಿತು.

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೦ (೯೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಾಪುರ ಮತ್ತು ಬಾಗಲಕೋಟ ಅವಳಿ ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕು ಕೇಂದ್ರಗಳಲ್ಲಿ ಡಾ: ಅಂಬೇಡ್ಕರ್ ಭವನ ಮತ್ತು ಡಾ: ಜಗಜೀವನರಾಮ ಭವನಗಳನ್ನು ನಿರ್ಮಿಸಲಾಗಿದೆ ;

(ಆ) ಜಿಲ್ಲಾ ಕೇಂದ್ರದಲ್ಲಿ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಡಾ: ಬಾಬಾಸಾಬ ಅಂಬೇಡ್ಕರ್ ಭವನ ಮತ್ತು ಡಾ: ಜಗಜೀವನರಾಮ ಭವನಗಳ ನಿರ್ಮಾಣಕ್ಕೆ ಸರ್ಕಾರ ನೀಡುವ ಅನುದಾನದ ಮೊತ್ತ ಎಷ್ಟು ; ಅದರಲ್ಲಿ ಸುಸಜ್ಜಿತವಾದ ಭವನ ನಿರ್ಮಾಣ ಕಾರ್ಯಸಾಧ್ಯವೆ ? (ವಿವರ ನೀಡುವುದು)

## ನಕಲಿ ಬಿಪಿಎಲ್ ಕಾರ್ಡ್‌ಗಳ ಪತ್ತೆ ಮಾಡುವುದು.

**ಶ್ರೀ ಟಿ. ಎ. ಶರವಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೪೧ (೧೪೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಕಲಿ ಬಿಪಿಎಲ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈವರೆವಿಗೂ ಪತ್ತೆಹಚ್ಚಲಾಗಿರುವ ನಕಲಿ ಬಿಪಿಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ವಿಧಾನಸಭೆ ಕ್ಷೇತ್ರವಾರು ಮಾಹಿತಿ ನೀಡುವುದು)



(ಇ) ಬಿಪಿಎಲ್ ಕಾರ್ಡ್ ಹೊಂದಲು ಇರುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಕಲಿ ಬಿಪಿಎಲ್ ಕಾರ್ಡ್ ಹೊಂದಿರುವವರ ವಿರುದ್ಧ ಸರ್ಕಾರವು ಇಲ್ಲಿಯವರೆವಿಗೂ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿರುವ ಚಾಲಕ ಕಂ ನಿರ್ವಾಹಕರ ಬಗ್ಗೆ.

**ಶ್ರೀ ಟಿ. ಎ. ಶರವಣ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು):–**

೪೨ (೯೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿರುವ ಚಾಲಕ ಕಂ ನಿರ್ವಾಹಕ ಮತ್ತು ಚಾಲಕರ ಒಟ್ಟು ಸಂಖ್ಯೆ ಎಷ್ಟು ; (ಡಿಪೋವಾರು ವಿವರ ನೀಡುವುದು)

(ಆ) ಸಂಸ್ಥೆಯಲ್ಲಿ ನಿರ್ವಾಹಕರಿಗೆ ಕಾರ್ಯ (ಮಾರ್ಗ) ಹಂಚಿಕೆ ಮಾಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ; ಕೆಲವು ಡಿಪೋ ಮ್ಯಾನೇಜರ್‌ಗಳು ಮಾರ್ಗ ಹಂಚಿಕೆಯಲ್ಲಿ ತಾರತಮ್ಯ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಪರಿಶೀಲನೆ ನಡೆಸಲಾಗಿದೆಯೇ ;

(ಇ) ಕೆಲವೊಮ್ಮೆ ನಿರ್ವಾಹಕರು ಮತ್ತು ಚಾಲಕರು ಕರ್ತವ್ಯಕ್ಕೆ ಹಾಜರಾದರೂ ಸಹ ಅವರಿಗೆ ಮಾರ್ಗ ಹಂಚಿಕೆ ಮಾಡದೆ, ವಾಹನಗಳು ರಿಪೇರಿ ಹಾಗೂ ವಾಹನಗಳು ಲಭ್ಯವಿಲ್ಲವೆಂದು ಕಾರಣಗಳನ್ನು ನೀಡಿ ಅವರಿಂದ ಹಾಜರಾತಿಯಲ್ಲಿ ಸಹಿಯನ್ನೂ

ಮಾಡಿಸಿಕೊಳ್ಳದೆ ಕೆಲವೊಮ್ಮೆ ಹಾಜರಾತಿಯನ್ನು ನೀಡದೇ ಅವರಿಂದ ರಜೆಯನ್ನು ಬರೆಸಿಕೊಳ್ಳುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ರೀತಿಯ ಪ್ರಕರಣಗಳು ನಡೆಯದಂತೆ ತಡೆಯಲು ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ನಕಲಿ ವೈದ್ಯರು ಹೆಚ್ಚುತ್ತಿರುವ ಕುರಿತು.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೩ (೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಕಲಿ ವೈದ್ಯರು ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಎಷ್ಟು ಜನ ನಕಲಿ ವೈದ್ಯರನ್ನು ಪತ್ತೆ ಹಚ್ಚಲಾಗಿದೆ ; ಬಂದಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ನಕಲಿ ವೈದ್ಯರಿಂದ ರೋಗಿಗಳಿಗೆ ಯಾವುದಾದರೂ ತೊಂದರೆಗಳಾಗಿವೆಯೇ ; ಅಂತಹ ನಕಲಿ ವೈದ್ಯರ ವಿರುದ್ಧ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಇ) ನಕಲಿ ವೈದ್ಯರನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)



## ಯೋಜನೆ ಮತ್ತು ಸಾಂಖ್ಯಿಕ ಇಲಾಖೆಗಳಲ್ಲಿ ಸಿಬ್ಬಂದಿ ಕೊರತೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪ (೯೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯೋಜನಾ ಮತ್ತು ಸಾಂಖ್ಯಿಕ ಇಲಾಖೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಜಿಲ್ಲೆಗಳಿಗೆ ಮಂಜೂರಾತಿಯಾಗಿರುವ, ಹಾಲಿ ಇರುವ ಹಾಗೂ ಬೇಕಾಗಿರುವ ಸಿಬ್ಬಂದಿಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ಚೀಟಿಗೆ ಹೊಸದಾಗಿ ಅರ್ಜಿ ಸಲ್ಲಿಸುವ ಕುರಿತು.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೫ (೯೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಡಿತರ ಚೀಟಿಗೆ ಹೊಸದಾಗಿ ಅರ್ಜಿ ಸಲ್ಲಿಸಲು ಜನ ಸಂದಣಿ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಎಷ್ಟು ಕೌಂಟರ್‌ಗಳನ್ನು ತೆರೆಯಲಾಗಿದೆ ಪ್ರತಿ ತಾಲ್ಲೂಕುವಾರು ಮಾಹಿತಿ ಒದಗಿಸುವುದು ;

(ಇ) ಪಡಿತರ ಚೀಟಿ ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಾರುಕಟ್ಟೆಯಲ್ಲಿ ದೊರೆಯುತ್ತಿರುವ ನೂಡಲ್ಸ್ ಆಹಾರ ಉತ್ಪಾದನೆಗಳಲ್ಲಿ ಹಾನಿಕಾರಕ ಅಂಶವಿದೆ ಎನ್ನುವ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೪೬ (೧೦೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಖಾಸಗಿ ಕಂಪನಿಯೊಂದರ ನೂಡಲ್ಸ್ ಆಹಾರ ಉತ್ಪಾದನೆಯಲ್ಲಿ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುವ ವಸ್ತುಗಳು ಇರುವ ಅಂಶ ಪತ್ತೆಯಾಗಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಮಾರುಕಟ್ಟೆಯಲ್ಲಿ ಸಿಗುವ ಯಾವ ಯಾವ ಕಂಪನಿಯ ಯಾವ ಯಾವ ಉತ್ಪಾದಕಗಳನ್ನು ಪರೀಕ್ಷೆಗೊಳಪಡಿಸಲಾಗಿದೆ ; ಮತ್ತು ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಈ ರೀತಿ ಪರೀಕ್ಷೆಗೊಳಪಡಿಸಿದ್ದು, ಅಪಾಯಕಾರಿ ಅಂಶಗಳಿರುವ ಯಾವ ಪದಾರ್ಥಗಳಿಂದ ಆರೋಗ್ಯದ ಮೇಲೆ ಯಾವ ರೀತಿಯ ಕೆಟ್ಟ ಪರಿಣಾಮ ಬೀರಬಹುದಾಗಿದೆ ?

## ಗಂಗಾ ಕಲ್ಯಾಣ ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೪೭ (೧೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಬೋರ್‌ವೆಲ್ ಕೊರೆಯುವಂತೆ ಕೋರಿ ಬಂದಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ;



(ಆ) ಸದರಿ ಸಾಲಿನಲ್ಲಿ ಬೋರ್‌ವೆಲ್ ಒದಗಿಸುವಲ್ಲಿ ಸರ್ಕಾರವು ಹಾಕಿಕೊಂಡಿದ್ದ ಗುರಿ ಎಷ್ಟು ;

(ಇ) ಸದರಿ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಎಷ್ಟು ಬೋರ್‌ವೆಲ್‌ಗಳನ್ನು ಕೊರೆಯಲಾಗಿದೆ ;

(ಈ) ಸದರಿ ಪ್ರಕ್ರಿಯೆಯಲ್ಲಿ ಇಲಾಖೆಯ ಸಾಕಷ್ಟು ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿ ಪ್ರಕ್ರಿಯೆಯ ವಿಳಂಬಕ್ಕೆ ಕಾರಣವೇನು ; ಹಾಕಿಕೊಂಡಿರುವ ಗುರಿ ತಲುಪಲು ಯಾವ ರೀತಿಯ ವಿಶೇಷ ಕ್ರಮ ಕೈಗೊಳ್ಳಲಾಗುವುದು ; ಗುರಿ ತಲುಪಲು ಬೇಕಾಗಿರುವ ಕಾಲಾವಧಿ ಎಷ್ಟು ?

## ವಿದ್ಯಾರ್ಥಿಗಳ ಬಸ್‌ಪಾಸ್ ಸೇವಾಶುಲ್ಕದಲ್ಲಿ ಹೆಚ್ಚಳ ಮಾಡಿರುವ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೪೮ (೧೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯಾರ್ಥಿಗಳ ಬಸ್ ಪಾಸ್ ಸೇವಾ ಶುಲ್ಕದಲ್ಲಿ ಜೂನ್ ೨೦೧೫ ರಿಂದ ಹೆಚ್ಚಳ ಮಾಡಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ ವಿವರ ನೀಡುವುದು ;

(ಇ) ಈ ರೀತಿ ಸೇವಾ ಶುಲ್ಕದಲ್ಲಿ ಹೆಚ್ಚಳ ಮಾಡಲು ಪ್ರಮುಖ ಕಾರಣವೇನು ?

## ೧೦೮ ಆಂಬುಲೆನ್ಸ್ ಸಿಬ್ಬಂದಿಗಳ ಬೇಡಿಕೆ ಹಾಗೂ ವೇತನ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೪೯ (೧೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೦೮ ಆಂಬುಲೆನ್ಸ್ ಸಿಬ್ಬಂದಿಗಳು ಜೂನ್ ೨೦೧೫ರಲ್ಲಿ ತಮ್ಮ ಬೇಡಿಕೆಗಳಿಗಾಗಿ ಮುಷ್ಕರ ನಡೆಸಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಅವರ ಬೇಡಿಕೆಗಳೇನು ;

(ಇ) ಸದರಿ ಸಿಬ್ಬಂದಿ ವರ್ಗದಲ್ಲಿ ಯಾವ ಯಾವ ರೀತಿಯ ಹುದ್ದೆಗಳಿವೆ ; (ವಿವರ ನೀಡುವುದು)

(ಈ) ಯಾವ ಯಾವ ಹುದ್ದೆಗೆ ಎಷ್ಟೆಷ್ಟು ವೇತನ ನಿಗಧಿಪಡಿಸಲಾಗಿದೆ ;

(ಉ) ಈ ಸೇವೆಯ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ; ಸಿಬ್ಬಂದಿಗೆ ವೇತನ ನೀಡುವ ವಿಷಯದಲ್ಲಿ ಯಾವುದಾದರೂ ನಿಬಂಧನೆಗಳನ್ನು ವಿಧಿಸಲಾಗಿದೆಯೇ ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿ ಡಯಾಲಿಸಿಸ್ ಸೆಂಟರ್‌ಗಳನ್ನು ಪ್ರಾರಂಭಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೦ (೧೦೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಡಯಾಲಿಸಿಸ್ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ; ಬೆಳಗಾವಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ; ಯಾವಾಗ ಅಳವಡಿಸಿ ಸದರಿ ಕೇಂದ್ರಗಳು ಪ್ರಾರಂಭಗೊಂಡಿದ್ದು ಯಾವಾಗ ; ಆ ಪೈಕಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)



(ಆ) ಡಯಾಲಿಸಿಸ್ ಕೇಂದ್ರಗಳು ಪ್ರಾರಂಭವಾಗದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇವುಗಳನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಮೂಲ ಸೌಕರ್ಯ ಒದಗಿಸುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೧ (೧೦೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ನಿಲಯಗಳೆಷ್ಟು ;

(ಆ) ಕೆಲವು ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳೆಷ್ಟು ; ಪ್ರಸ್ತುತ ವಸತಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಸತಿ ನಿಲಯವಾರು ವಿವರ ನೀಡುವುದು)

(ಈ) ಬಾಡಿಗೆ ಕಟ್ಟಡದಲ್ಲಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಅವುಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಹಿಂದುಳಿದ ವರ್ಗದ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಮೂಲಸೌಕರ್ಯ ಒದಗಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೨ (೧೦೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ನಿಲಯಗಳೆಷ್ಟು ;

(ಆ) ಕೆಲವು ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿರುವ ವಸತಿ ನಿಲಯಗಳೆಷ್ಟು; ಪ್ರತಿಯೊಂದು ವಸತಿ ನಿಲಯವು ಹೊಂದಿರಬೇಕಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಈ) ಬಾಡಿಗೆ ಕಟ್ಟಡದಲ್ಲಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಅವುಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?



## ಬೆಳಗಾವಿಯಲ್ಲಿರುವ ಡಾ॥ ನಾಗಲೋಟಿಮಠ ವಿಜ್ಞಾನ ಕೇಂದ್ರದ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೩ (೧೦೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯಲ್ಲಿ ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಚಾಲಿತ ಡಾ॥ ನಾಗಲೋಟಿಮಠ ವಿಜ್ಞಾನ ಕೇಂದ್ರವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕೇಂದ್ರದಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮೂಲಭೂತ ಸೌಕರ್ಯಗಳಿಗಾಗಿ ಸರ್ಕಾರಕ್ಕೆ ಮನವಿ ಬಂದಿರುವುದು ನಿಜವೆ ;

(ಈ) ಹಾಗಿದ್ದಲ್ಲಿ ಯಾವಾಗ ಸದರಿ ಸೌಕರ್ಯಗಳನ್ನು ಒದಗಿಸಲಾಗುವುದು ಯಾವಾಗ ?

## ಬೈಲಹೊಂಗಲ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ಕುರಿತು.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೫೪ (೧೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ಸರ್ಕಾರಿ ಆಸ್ಪತ್ರೆಯಲ್ಲಿ ಒಟ್ಟು ಮಂಜೂರಾದ ವೈದ್ಯಕೀಯ ಹಾಗೂ ವೈದ್ಯಕೇತರ ಹುದ್ದೆಗಳೆಷ್ಟು; ಮತ್ತು ಇತರೆ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಭರ್ತಿ ಮಾಡಲಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಸದರಿ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿನ ಬಡತನ ಪ್ರಮಾಣ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫ (೧೦೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಡತನದ ರೇಖೆಯ ಶೇಕಡವಾರು ಪ್ರಮಾಣವೆಷ್ಟು ; ಬಡತನ ನಿರ್ಮೂಲನೆಗೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಬಡತನ ನಿರ್ಮೂಲನೆಗೆ ಸರ್ಕಾರ ಕಾಯ್ದಿರಿಸಿದ ಹಣ ಎಷ್ಟು ; ೨೦೧೪–೧೫ನೇ ಸಾಲಿಗೆ ಕಾಯ್ದಿರಿಸಲಾಗಿರುವ ಮೊತ್ತ ಎಷ್ಟು ;

(ಇ) ೨೦೧೩–೧೪ನೇ ಸಾಲಿನಲ್ಲಿ ಬಡತನ ನಿರ್ಮೂಲನಕ್ಕೆ ಕಾಯ್ದಿರಿಸಿದ ಹಣ ಸಂಪೂರ್ಣವಾಗಿ ಖರ್ಚಾಗಿದೆಯೇ ? (ವಿವರ ನೀಡುವುದು)



## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೬ (೧೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಎಷ್ಟು ಸಮುದಾಯ ಆರೋಗ್ಯ ಕೇಂದ್ರಗಳಿಗೆ ನಗು, ಮಗು ಯೋಜನೆ ಅಡಿಯಲ್ಲಿ ಎಷ್ಟು ವಾಹನಗಳನ್ನು ನೀಡಲಾಗಿದೆ ;

(ಇ) ನೀಡದಿದ್ದರೇ, ಇದಕ್ಕೆ ಕಾರಣಗಳೇನು ; ಇನ್ನು ಎಷ್ಟು ಕೇಂದ್ರಗಳಿಗೆ ವಾಹನವನ್ನು ಒದಗಿಸಬೇಕಾಗಿದೆ ; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭ (೧೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ನಿಲಯುಗಳ ಸಂಖ್ಯೆ ಎಷ್ಟು ;

(ಆ) ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯ ಇಲ್ಲದೇ, ವಿದ್ಯಾರ್ಥಿಗಳು ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸ್ವಂತ ಕಟ್ಟಡ ಹೊಂದಿರುವ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## Indian Institute of Science ಬೆಳಗಾವಿಯಲ್ಲಿ ಸ್ಥಾಪಿಸುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೮ (೧೧೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದ ರಾಜಧಾನಿ ಬೆಂಗಳೂರು ಮಹಾನಗರದಲ್ಲಿರುವ ಅಖಿಲ ಭಾರತ ವಿಜ್ಞಾನ ಕೇಂದ್ರ (Indian Institute of Science) ದಂತಹ ಸಂಸ್ಥೆಯನ್ನು ಉತ್ತರ ಕರ್ನಾಟಕ ಭಾಗದಲ್ಲಿ ವಿಶೇಷವಾಗಿ ಬೆಳಗಾವಿಯಲ್ಲಿ ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ ಈ ವಿಚಾರವಾಗಿ ಕೇಂದ್ರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಉದ್ದೇಶಿಸಲಾಗಿದೆಯೇ ?

## ಆಯವ್ಯಯದಲ್ಲಿ ಹಂಚಿಕೆ ಮಾಡಲಾಗುವ ಹಣ ಸರಿಯಾಗಿ ಬಿಡುಗಡೆಯಾಗದೆ ಇರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೯ (೧೧೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಯವ್ಯಯದಲ್ಲಿ ಹಂಚಿಕೆ ಮಾಡಲಾಗುವ ಹಣ ಸಮಯಕ್ಕೆ ಸರಿಯಾಗಿ ಬಿಡುಗಡೆಯಾಗದೆ ಇರುವುದರಿಂದ, ಅಭಿವೃದ್ಧಿ



ಕಾರ್ಯಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಾರ್ಚ್ ತಿಂಗಳಲ್ಲಿ ಆಯವ್ಯಯ ಮಂಡನೆಯಾದ ನಂತರ ಇಲಾಖಾವಾರು ಹಣಕಾಸಿನ ಹಂಚಿಕೆಯನ್ನು ಯಾವ ತಿಂಗಳಿನಲ್ಲಿ ಮಾಡಲಾಗುವುದು ;

(ಇ) ಇಲಾಖಾವಾರು ಅನುದಾನ ಬಿಡುಗಡೆ ವೇಳೆ ಸರಿಯಾಗಿ ಹಂಚಿಕೆಯಾಗದೆ ವರ್ಷದ ಅಂತ್ಯದಲ್ಲಿ ಬಿಡುಗಡೆಯಾಗುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅನುದಾನದ ಹಂಚಿಕೆ ವಿಷಯವಾಗಿ ತ್ರೈಮಾಸಿಕ ಹಣ ಬಿಡುಗಡೆಗೆ ವ್ಯವಸ್ಥೆ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ ?

## ಪ.ಜಾತಿ/ಪ.ಪಂಗಡದವರ ಹಣ ಸರಿಯಾಗಿ ಬಳಕೆಯಾಗದೇ ಇರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೦ (೧೧೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆಯವ್ಯಯದಲ್ಲಿ ಪ.ಜಾತಿ ಮತ್ತು ಪ.ಪಂಗಡದವರಿಗೆ ಹಂಚಿಕೆ ಮಾಡಲಾಗುವ ಹಣ ಸರಿಯಾಗಿ ಬಳಕೆಯಾಗದೆ ಇರುವುದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ರಾಜ್ಯ ಸಮಿತಿ ಏನು ಕ್ರಮಗಳನ್ನು ಕೈಗೊಂಡಿದೆ ;

(ಆ) ಹಾಗಿದ್ದಲ್ಲಿ, ೨೦೧೫-೧೬ನೇ ಸಾಲಿನಲ್ಲಿ ಇಲಾಖಾವಾರು ಅನುದಾನ ಹಂಚಿಕೆಯನ್ನು ಯಾವ ತಿಂಗಳಿನಲ್ಲಿ ಮಾಡಲಾಗುವುದು ;

(ಇ) ಹಂಚಿಕೆಯಾಗಿರುವ ಅನುದಾನವನ್ನು ವರ್ಷದ ಅಂತ್ಯದಲ್ಲಿ ಬಿಡುಗಡೆ ಮಾಡುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಅನುದಾನದ ಹಂಚಿಕೆ ವಿಚಾರವಾಗಿ ತ್ರೈಮಾಸಿಕ ಹಣ ಬಿಡುಗಡೆ ವ್ಯವಸ್ಥೆ ಮಾಡುವ ವಿಷಯವು ಸರ್ಕಾರದ ಮುಂದಿದೆಯೇ ?

## ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಅಧ್ಯಾಪಕರ ಕೊರತೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧ (೧೧೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಅಧ್ಯಾಪಕರ ಕೊರತೆಯಿಂದ ವೈದ್ಯಕೀಯ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತೊಂದರೆ ಆಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಎಂ.ಸಿ.ಐ. ನಿಯಮದ ಪ್ರಕಾರ ವಿದ್ಯಾರ್ಥಿ ಮತ್ತು ಉಪನ್ಯಾಸಕರು ಯಾವ ಅನುಪಾತದಲ್ಲಿ ಇರಬೇಕು ; (ವಿವರ ನೀಡುವುದು)

(ಇ) ಬೆಳಗಾವಿಯ ಬಿಮ್ಸ್ (BIMS)ನಲ್ಲಿ ಒಟ್ಟು ಮಂಜೂರಾದ ಉಪನ್ಯಾಸಕರ ಹುದ್ದೆ ಎಷ್ಟು ; ಖಾಲಿ ಇರುವ ಉಪನ್ಯಾಸಕರ ಹುದ್ದೆ ಎಷ್ಟು ;



(ಈ) ಯಾವ ಕಾಲ ಮಿತಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ವಿದ್ಯಾರ್ಥಿನಿಲಯಗಳ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ ( ಶಿಕ್ಷಕರ ಕ್ಷೇತ್ರ) :–**

೬೨ (೧೧೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ನೀಡುತ್ತಿರುವ ಅನುದಾನವೆಷ್ಟು ;

(ಆ) ಈ ಅನುದಾನವನ್ನು ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಸಾಕಾಗದೆ ಇರುವುದರಿಂದ, ಸದರಿ ಅನುದಾನವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಅನುದಾನವನ್ನು ದುರುಪಯೋಗಪಡಿಸಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ದುರುಪಯೋಗಪಡಿಸಿಕೊಂಡಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಸಾರ್ವಜನಿಕ ಆಸ್ಪತ್ರೆಗಳ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ ( ಶಿಕ್ಷಕರ ಕ್ಷೇತ್ರ) :–**

೬೩ (೧೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರುಗಳ ಮತ್ತು ಶುಶ್ರೂಷೆ ಸಿಬ್ಬಂದಿಯವರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಸದರಿ ಕೊರತೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಆಸ್ಪತ್ರೆಗಳ ತುರ್ತು ಚಿಕಿತ್ಸಾ ಘಟಕ ವಿಭಾಗವು ತೀರಾ ಕಿರಿದಾಗಿರುವುದು ಮತ್ತು ಇಲ್ಲಿನ ವೈದ್ಯಾಧಿಕಾರಿಗಳಿಗೆ ವಸತಿ ಗೃಹಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರವು ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಮಾಹಿತಿ ತಂತ್ರಜ್ಞಾನ ಸಂಸ್ಥೆಗಳ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ ( ಶಿಕ್ಷಕರ ಕ್ಷೇತ್ರ) :–**

೬೪ (೧೨೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳೆಷ್ಟು ;

(ಆ) ಈ ಸಂಸ್ಥೆಗಳು ಹೊಂದಿರುವ ಬಂಡವಾಳವೆಷ್ಟು ;

(ಇ) ಸರ್ಕಾರದಿಂದ ಪಡೆದಿರುವ ಸೌಲಭ್ಯಗಳೇನು ;

(ಈ) ಸದರಿ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ಅದರಲ್ಲಿ ಕನ್ನಡಿಗರ ಸಂಖ್ಯೆ ಎಷ್ಟು ;

(ಉ) ಕನ್ನಡಿಗರನ್ನು ಕಡೆಗಣಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?



## ಪರವಾನಗಿ ಪಡೆದಿರುವ ಖಾಸಗಿ ಬಸ್ಸುಗಳ ಕುರಿತು.

**ಶ್ರೀ ವೈ. ಎ. ನಾರಾಯಣಸ್ವಾಮಿ ( ಶಿಕ್ಷಕರ ಕ್ಷೇತ್ರ) :–**

೬೫ (೧೨೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರಿಗೆ ಇಲಾಖೆಯಲ್ಲಿ ಪರವಾನಿಗೆ ಪಡೆದಿರುವ ಖಾಸಗಿ ಬಸ್ಸುಗಳ ನಿಗದಿತ ಮಾರ್ಗದಲ್ಲಿ ಸಂಚರಿಸದೇ ಇರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಅಂತಹ ಖಾಸಗಿ ಬಸ್ಸುಗಳ ಮಾರ್ಗಗಳ ವಿವರಗಳನ್ನು ನೀಡುವುದು ;

(ಇ) ಖಾಸಗಿ ಬಸ್ಸುಗಳ ಇಂತಹ ಉಲ್ಲಂಘನೆಯಿಂದ ಸರ್ಕಾರಿ ಸ್ವಾಮ್ಯದ ಬಸ್ಸುಗಳ ಸಂಚಾರದಲ್ಲಿ ಉಂಟಾಗಿರುವ ನಷ್ಟದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಂತಹ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ರೂಪಿಸಿರುವ ಯೋಜನೆಗಳೇನು ;

(ಉ) ಪರವಾನಿಗೆಯನ್ನು ಉಲ್ಲಂಘಿಸಿದ ಪ್ರಕರಣಗಳಲ್ಲಿ ಸರ್ಕಾರ ವಿಧಿಸುವ ದಂಡವೇನು ?

## ಏಮ್ಸ್ ಮಾದರಿಯಲ್ಲಿ ನಮ್ಮ ರಾಜ್ಯದಲ್ಲಿ ಸಂಸ್ಥೆ ಪ್ರಾರಂಭಿಸುವ ಕುರಿತು

**ಶ್ರೀ ವಿ. ಸೋಮಣ್ಣ ( ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೬ (೧೨೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೆಹಲಿ ಅಖಿಲ ಭಾರತೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಏಮ್ಸ್) ಮಾದರಿಯ ಸಂಸ್ಥೆಯನ್ನು ರಾಜ್ಯದಲ್ಲೂ ಸ್ಥಾಪನೆ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಆ) ಇದಕ್ಕಾಗಿ ರಾಜ್ಯದ ಯಾವ ಯಾವ ಸ್ಥಳಗಳನ್ನು ಗುರುತಿಸಲಾಗಿದೆ, ಇದರಲ್ಲಿ ರಾಜ್ಯ ಸರ್ಕಾರದ ಪಾತ್ರವೇನು; (ಪ್ರಗತಿ ವಿವರಗಳನ್ನು ಒದಗಿಸುವುದು)

(ಇ) ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಯಾವ ರೀತಿಯ ಸಹಾಯಗಳನ್ನು ಒದಗಿಸಲಿದೆ ;

(ಈ) ಇಎಸ್‌ಐ ವೈದ್ಯಕೀಯ ಕಾಲೇಜುಗಳನ್ನು ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಗೆ ತರುವ ಬಗ್ಗೆ ಸರ್ಕಾರದ ನಿಲುವೇನು ಸ್ಪಷ್ಟಪಡಿಸುವುದು ;

(ಉ) ಸದರಿ ವಿಷಯದ ಕುರಿತು ಸರ್ಕಾರ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಿದೆಯೇ; ಚರ್ಚಿಸಿದ್ದಲ್ಲಿ, ಈ ಪ್ರಸ್ತಾಪದ ಬಗ್ಗೆ ಕೇಂದ್ರ ಸರ್ಕಾರದ ನಿರ್ಧಾರಗಳೇನು ? (ವಿವರ ಒದಗಿಸುವುದು)

## ಸಾರಿಗೆ ಸಂಸ್ಥೆಯಲ್ಲಿ ಭ್ರಷ್ಟಾಚಾರ ಹಾಗೂ ಸಿಬ್ಬಂದಿಗಳ ಮೇಲೆ ಕಿರುಕುಳ ಕುರಿತು.

**ಶ್ರೀ ವಿ. ಸೋಮಣ್ಣ ( ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೭ (೧೨೩) ಮಾನ್ಯ ಸಾರಿಗೆ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ವಿವಿಧ ಸಾರಿಗೆ ನಿಗಮಗಳಲ್ಲಿ ವ್ಯಾಪಕ ಭ್ರಷ್ಟಾಚಾರ, ಸಿಬ್ಬಂದಿಗಳ ಮೇಲೆ ಕಿರುಕುಳ ಇತ್ಯಾದಿ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಕರ್ತವ್ಯ ನಿರ್ವಹಿಸಲು, ಮಾರ್ಗಗಳ ನಿಯೋಜನೆ, ವರ್ಗಾವಣೆ ಇತ್ಯಾದಿಗಳಲ್ಲಿ ಅಧಿಕ ಲಂಚದ ಹಾವಳಿ ಜಾಸ್ತಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;



(ಇ) ಅಧಿಕಾರಿಗಳ ಮತ್ತು ತನಿಖಾಧಿಕಾರಿಗಳ ಮಧ್ಯೆ ಒಡಂಬಡಿಕೆ, ಒಳಒಪ್ಪಂದಗಳಿಂದ ನೌಕರ ಕಾರ್ಮಿಕರಿಗೆ ಆಗುತ್ತಿರುವ ಶೋಷಣೆ ತಪ್ಪಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ;

(ಈ) ಈ ನಿಟ್ಟಿನಲ್ಲಿ ಟ್ರ್ಯಾಪ್ ಅಳವಡಿಕೆಗೆ ಸಾರಿಗೆ ನಿಗಮಗಳು ಮುಂದಾಗಿದ್ದು ನಿಜವೇ; ಇದನ್ನು ಸಮರ್ಪಕವಾಗಿ ಹಾಗೂ ಲಂಚ ಆರೋಪದ ಸಿಬ್ಬಂದಿಗಳ ಕುಮ್ಮಕ್ಕಿನಿಂದ ಅನುಷ್ಠಾನಗೊಳ್ಳದಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಸಿಬ್ಬಂದಿಗಳ ಮೇಲಿನ ಕಿರುಕುಳ, ಭ್ರಷ್ಟಾಚಾರದ ತಡೆಗೆ ಸರ್ಕಾರ ಯಾವ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳುವುದು ?

## ಎಸ್.ಸಿ./ಎಸ್.ಟಿ./ಪಿ.ಎಸ್.ಪಿ. ಯೋಜನೆಗಳ ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀಮತಿ ವಿಮಲಾಗೌಡ ( ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೮ (೧೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಯೋಜನೆಗಳ ಅಡಿಯಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ;

(ಆ) ಸದರಿ ಹಣವನ್ನು ಸಂಪೂರ್ಣವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನಾಂಗದ ಅಭಿವೃದ್ಧಿಗಾಗಿಯೇ ಉಪಯೋಗಿಸಲಾಗಿದೆಯೇ ;

(ಇ) ಇದರಲ್ಲಿ ಖರ್ಚಾಗದೆ ಉಳಿದಿರುವ ಅನುದಾನವೆಷ್ಟು ; ಆಯಾ ಆರ್ಥಿಕ ವರ್ಷದಲ್ಲಿ ಅನುದಾನವನ್ನು ವೆಚ್ಚ ಮಾಡದೆ ಉಳಿಯಲು ಕಾರಣವೇನು ; ವೆಚ್ಚ ಮಾಡಿರುವ ಅನುದಾನದಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಯಾರು ; ಅವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಡ್ಯ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಕ್ಷೇತ್ರದ ಅಭಿವೃದ್ಧಿ ಹಾಗೂ ಅನುದಾನ.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೬೯ (೧೨೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಸರ್ಕಾರ ಹಮ್ಮಿಕೊಂಡ ಗುರಿ ಮತ್ತು ಸಾಧನೆಗಳು ; (ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯ ಸುಧಾರಣೆಗಾಗಿ ಸರ್ಕಾರ ಮೀಸಲಿಟ್ಟ ಅನುದಾನ ಎಷ್ಟು ;

(ಇ) ಸದರಿ ಕ್ಷೇತ್ರದ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು ?



## ಸರ್ಕಾರಿ/ಖಾಸಗಿ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ ಕುರಿತು.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೦ (೧೨೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ/ಖಾಸಗಿ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಖಾಸಗಿ ಬಸ್ಸುಗಳು ರಹದಾರಿ ಪರವಾನಗಿ ನಿಯಮವನ್ನು ಉಲ್ಲಂಘಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕಳೆದ ೨ ವರ್ಷಗಳಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಇಂತಹ ಎಷ್ಟು ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಕಾನೂನು ರೀತ್ಯಾ ಕ್ರಮ ಜರುಗಿಸಲಾಗಿದೆ ; (ವಿವರ ನೀಡುವುದು)

## ನ್ಯಾಯ ಬೆಲೆ ಅಂಗಡಿಗಳ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೧ (೧೩೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ನ್ಯಾಯ ಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಖಾಸಗಿಯವರು ನಡೆಸುತ್ತಿರುವ ಅಂಗಡಿಗಳ ಸಂಖ್ಯೆ ಎಷ್ಟು ಹಾಗೂ ಸಹಕಾರಿ ಸಂಘಗಳು ನಡೆಸುತ್ತಿರುವ ಅಂಗಡಿಗಳೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅಕ್ಕಿ ಗೋಧಿ ಸಕ್ಕರೆ ಸೀಮೆಎಣ್ಣೆ ಹಂಚಲು ಏಜೆಂಟರಿಗೆ ನೀಡುತ್ತಿರುವ ಕಮೀಷನ್ ಎಷ್ಟು ;

(ಈ) ಪಡಿತರ ವ್ಯವಸ್ಥೆಯಲ್ಲಿ ಹೆಚ್ಚಾಗಿ ಸೋರಿಕೆ ಆಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ?

## ವೈದ್ಯಕೀಯ ಆಸ್ಪತ್ರೆ ಮತ್ತು ಕಾಲೇಜುಗಳ ವಿವರ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨ (೧೨೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವೈದ್ಯಕೀಯ ಆಸ್ಪತ್ರೆ ಮತ್ತು ಕಾಲೇಜುಗಳ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ವರ್ಷ ಯಾವ ಜಿಲ್ಲಾ ಕೇಂದ್ರಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಣಯಿಸಿದೆ ; (ವಿವರ ನೀಡುವುದು)

(ಇ) ರಾಜ್ಯದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ ಎಷ್ಟು ಸಿಬ್ಬಂದಿಯ ಕೊರತೆ ಇದೆ ; (ಹುದ್ದೆವಾರು ಮಾಹಿತಿ ನೀಡುವುದು)

(ಉ) ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕಾಲಾವಕಾಶ ಎಷ್ಟು ?



## ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ಕಂಪನಿಗಳ ಕುರಿತು.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩ (೧೩೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಕಂಪನಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ಕಂಪನಿಗಳ ವ್ಯವಹಾರ ಹಾಗೂ ರಫ್ತುಗಳ ವಿವರಗಳೇನು ;

(ಇ) ಮಾಹಿತಿ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ವಿದೇಶಿ ವಿನಿಮಯದಲ್ಲಿ ರಾಜ್ಯದ ಪಾಲು ಎಷ್ಟು ಹಾಗೂ ರಫ್ತು ಪ್ರಮಾಣ ಹೆಚ್ಚಳಕ್ಕೆ ಯಾವ ಮಾದರಿಯ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕುರಿತು.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೪ (೧೩೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಈ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಈ ವಸತಿ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಮತ್ತು ನೇರವಾಗಿ ನೇಮಕಗೊಂಡ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ನೇರವಾಗಿ ಆಯ್ಕೆಗೊಂಡ ಶಿಕ್ಷಕರುಗಳಿಗೆ ನೇಮಕಾತಿ ಆದೇಶ ನೀಡಲಾಗಿದೆಯೇ ಇಲ್ಲದಿದ್ದಲ್ಲಿ ಕಾರಣಗಳೇನು ;

(ಈ) ಶಿಕ್ಷಕರುಗಳ ಕುರಿತಂತೆ ಸರ್ವೋಚ್ಚ ನ್ಯಾಯಾಲಯ ಹಾಗೂ ರಾಜ್ಯ ಉಚ್ಚ ನ್ಯಾಯಾಲಯ ನೀಡಿರುವ ಆದೇಶವೇನು ; ನ್ಯಾಯಾಲಯದ ಆದೇಶ ನಂತರ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಾರ್ವಜನಿಕ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ.

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೫ (೧೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಸಾರ್ವಜನಿಕ, ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು ವಿವರಗಳನ್ನು ನೀಡುವುದು)

(ಆ) ಆಸ್ಪತ್ರೆಗಳಲ್ಲಿ ವೈದ್ಯರ ಇತರೆ ಸಿಬ್ಬಂದಿಗಳ ಹಾಗೂ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೊರತೆಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ವಿಕ್ಟೋರಿಯ ಆಸ್ಪತ್ರೆಯಲ್ಲಿರುವುದು ಹಾಗೂ ಇತರೆ ಕಡೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಹಾಗೂ ಆಧುನಿಕ ಯಂತ್ರೋಪಕರಣಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಈ) ಬಂದಿದ್ದಲ್ಲಿ, ಔಷಧಿಗಳ ಹಾಗೂ ಆಧುನಿಕ ಯಂತ್ರೋ–ಪಕರಣಗಳನ್ನು ಆದ್ಯತೆಯ ಮೇರೆಗೆ ಸರಬರಾಜು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವಾಗ ಒದಗಿಸಲಾಗುವುದು ?

## ಡಯಾಲಿಸಿಸ್, ಆಯುಷ್ ಸಂಚಾರಿ ಘಟಕಗಳು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೬ (೧೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಗ್ರಾಮಾಂತರ ಜಿಲ್ಲೆ ಆನೇಕಲ್ ಮತ ಕ್ಷೇತ್ರದಲ್ಲಿ ಹೆಚ್ಚುವರಿಯಾಗಿ ಡಯಾಲಿಸಿಸ್ ಆಯುಷ್ ಸಂಚಾರಿ ಘಟಕಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಈ ಯೋಜನೆಗೆ ಸರ್ಕಾರದಿಂದ ಎಷ್ಟು ಅನುದಾನ ಮಂಜೂರಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಸಂಚಾರಿ ಘಟಕಗಳನ್ನು ಪ್ರಾರಂಭಿಸುವ ಪ್ರಸ್ತಾವನೆಗೆ ಅನುಮತಿ ಮತ್ತು ಚಾಲನೆಯನ್ನು ನೀಡಲು ಸರ್ಕಾರವು ನಿಗದಿಪಡಿಸಿರುವ ಕಾಲಮಿತಿ ಎಷ್ಟು ?

## ರಾಜ್ಯದಲ್ಲಿರುವ ಖಾಸಗಿ / ಸರ್ಕಾರಿ ಅನಾಥಾಶ್ರಮಗಳ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೭೭ (೧೪೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ, ಖಾಸಗಿ, ಅನುದಾನಿತ, ಅನುದಾನ ರಹಿತ ಅನಾಥಾಶ್ರಮ / ಅನಾಥಾಲಯಗಳ ಸಂಖ್ಯೆ ಎಷ್ಟು ; ಹೆಸರು ಮತ್ತು ವಿಳಾಸ, ಮಕ್ಕಳ ಸಂಖ್ಯೆಯನ್ನು ಒಳಗೊಂಡಂತೆ (ಗಂಡು, ಹೆಣ್ಣು) ಅನಾಥಾಲಯವಾರು ವಿವರ ನೀಡುವುದು ;

(ಆ) ಸರ್ಕಾರದಿಂದ ಒದಗಿಸುತ್ತಿರುವ ಅನುದಾನವೆಷ್ಟು ; (ಯೋಜನಾವಾರು ವಿವರ ನೀಡುವುದು)

(ಇ) ವಿದೇಶದ ಮೂಲದಿಂದ ಹಣಕಾಸು ನೆರವು ಪಡೆಯುತ್ತಿರುವ ಅನಾಥಾಲಯಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ದ್ವಿತೀಯ ಪಿ.ಯು.ಸಿ. ಪೂರಕ ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ ಉತ್ತೀರ್ಣರಾದಲ್ಲಿ ಎಮ್.ಬಿ.ಬಿ.ಎಸ್. ಪ್ರವೇಶದ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೭೮ (೧೪೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಯು. ವಿಜ್ಞಾನ ವಿಭಾಗದ ಪೂರಕ ಪರೀಕ್ಷೆಯಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳಿಗೆ ಮ್ಯಾನೇಜ್‌ಮೆಂಟ್ ಕೋಟಾದಡಿ ಎಮ್.ಬಿ.ಬಿ.ಎಸ್. ವ್ಯಾಸಂಗಕ್ಕೆ ಪ್ರವೇಶಾತಿ ಪಡೆಯಲು ಅವಕಾಶವಿದೆಯೇ ;

(ಆ) ಈ ನಿಟ್ಟಿನಲ್ಲಿ ಸರ್ಕಾರದ ನಿಯಮಗಳೇನು ?

## ಪ್ರಾದೇಶಿಕ / ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೭೯ (೧೪೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಲ್ಲೆಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರ / ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗಿದೆ ; ಯಾವ ಹಂತದಲ್ಲಿದೆ ;



(ಆ) ಸ್ಥಾಪಿಸಿದ್ದರೆ, ಯಾವ ಯಾವ ರೀತಿಯ ಚಟುವಟಿಕೆ ಕೈಗೊಳ್ಳಲಾಗಿದೆ ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಶಾಲೆಗಳಲ್ಲಿನ ಗ್ರಾಹಕ ಕ್ಲಬ್‌ಗಳನ್ನು ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೮೦ (೧೬೧) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಯಾವ ಯಾವ ಶಾಲೆಗಳಲ್ಲಿ "ಶಾಲಾ ಗ್ರಾಹಕರ ಕ್ಲಬ್"ಗಳನ್ನು ನಡೆಸಲಾಗುತ್ತಿದೆ ;

(ಆ) ಯಾವ ಯಾವ "ಶಾಲಾ ಗ್ರಾಹಕರ ಕ್ಲಬ್"ಗಳನ್ನು ನಡೆಸಲು ಮೇಲ್ವಿಚಾರಣೆ ಮಾಡಲು ಯಾವ ಯಾವ ಸ್ವಯಂ ಸೇವಾ ಸಂಘಗಳಿಗೆ ತರಬೇತಿ ನೀಡಲಾಗಿದೆ ; ಯಾರಿಗೆ ವಹಿಸಲಾಗಿದೆ ? (ವಿವರ ನೀಡುವುದು)

(ಇ) ಈ ಕ್ಲಬ್‌ಗಳ ಮೂಲಕ ಯಾವ ರೀತಿಯ ಕಾರ್ಯ ಚಟುವಟಿಕೆಗೆ ಕ್ರಮ ಕೈಗೊಂಡಿದೆ; ಸರ್ಕಾರದಿಂದ ಒದಗಿಸಿರುವ ಹಣ ಎಷ್ಟು ? (ಕಳೆದ ಎರಡು ವರ್ಷದ ಮಾಹಿತಿ ನೀಡುವುದು)

## ಆಚರಣೆಯಲ್ಲಿರುವ ಮಹಾಪುರುಷರ ಜನ್ಮದಿನ/ಪುಣ್ಯ ತಿಥಿ ಸಮಾರಂಭದ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೮೧ (೧೬೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಮಹಾಪುರುಷರ ಜನ್ಮ ದಿನ/ಪುಣ್ಯ ತಿಥಿಯನ್ನು ಸರ್ಕಾರದಿಂದ ಅಧಿಕೃತವಾಗಿ ಆಚರಿಸಲು ಆದೇಶಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರತಿ ಆಚರಣೆಯ ಸ್ವರೂಪಗಳೇನು ; (ವಿವರಿಸಿ)

(ಇ) ವಿವಿಧ ಹಂತಗಳ ಪ್ರತಿ ಆಚರಣೆಗೆ ಹಾಗೂ ಒಟ್ಟು ಒದಗಿಸಿರುವ ಹಣಕಾಸಿನ ವಿವರವೆಷ್ಟು ;

(ಈ) ಯಾವ ಯಾವ ಆಚರಣೆಗೆ ರಜೆ ಘೋಷಿಸಲಾಗಿದೆ ?

## ವಿವಿಧ ಸಮುದಾಯಗಳಿಂದ ಸಮಾಜ ಕಲ್ಯಾಣ ಇಲಾಖೆಗೆ ಸಮುದಾಯಭವನ, ವಿದ್ಯಾರ್ಥಿ ನಿಲಯ ಹಾಗೂ ಇತರೆ ಕಟ್ಟಡಗಳಿಗೆ ಅನುದಾನ ಕೋರಿ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೮೨ (೧೪೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ವಿವಿಧ ಸಮುದಾಯಗಳಿಂದ ಸಮುದಾಯ ಭವನ, ವಿದ್ಯಾರ್ಥಿನಿಲಯ ಹಾಗೂ ಇತರೆ ಕಟ್ಟಡಗಳಿಗೆ ಅನುದಾನ ಕೋರಿ ಸಮಾಜ ಕಲ್ಯಾಣ ಇಲಾಖೆಗೆ



ಬಂದಿರುವ ಮನವಿಗಳ ಸಂಖ್ಯೆ ಎಷ್ಟು; ವಿಲೇವಾರಿ ಮಾಡಿದ ಸಂಖ್ಯೆ ಎಷ್ಟು; ಬಾಕಿ ಇರುವ ಸಂಖ್ಯೆ ಎಷ್ಟು; (ಜಿಲ್ಲಾವಾರು ಪೂರ್ಣ ವಿವರ ಒದಗಿಸುವುದು)

(ಆ) ಸದರಿ ಸಾಲಿನಲ್ಲಿ ಜಿಲ್ಲೆಗಳಿಂದ ಕೇಂದ್ರ ಕಚೇರಿಗೆ ಕಳುಹಿಸಿರುವ ಕಡತಗಳ ಸಂಖ್ಯೆ ಎಷ್ಟು; ಜಿಲ್ಲೆಗಳಲ್ಲಿ ಬಾಕಿ ಉಳಿಸಿಕೊಂಡಿರುವ ಸಂಖ್ಯೆ ಎಷ್ಟು; ಅದಕ್ಕೆ ಕಾರಣಗಳೇನು; (ಜಿಲ್ಲಾವಾರು ಪೂರ್ಣ ವಿವರ ಒದಗಿಸುವುದು)

(ಇ) ಜಿಲ್ಲೆಗಳಿಂದ ಕೇಂದ್ರ ಕಚೇರಿಗೆ ಬಂದಿರುವ ಮನವಿಗಳ ಸಂಖ್ಯೆ ಎಷ್ಟು; ಬಾಕಿ ಇರುವ ಮನವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಪೂರ್ಣ ವಿವರ ಒದಗಿಸುವುದು)

## ಗಂಗಾ ಕಲ್ಯಾಣ ಯೋಜನೆ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೩ (೧೪೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಗೆ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ವಾಲ್ಮಿಕಿ ಅಭಿವೃದ್ಧಿ ನಿಗಮ, ಡಿ.ದೇವರಾಜ್ ಅರಸು ಅಭಿವೃದ್ಧಿ ನಿಗಮ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಲ್ಲಿ ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಸ್ವೀಕೃತವಾದ ಗಂಗಾ ಕಲ್ಯಾಣ ಮತ್ತು ವೈಯಕ್ತಿಕ ಸಾಲದ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಅವುಗಳಲ್ಲಿ ಮಂಜೂರಾದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಜೂರಾತಿ ಪಡೆದ ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯನ್ವಯ ಬೋರ್‌ವೆಲ್ ಕೊರೆಯಿಸಿ ಪಂಪ್ ಸೆಟ್ ಮತ್ತು ಇತರೆ ಸಾಮುಗ್ರಿಗಳನ್ನು ವಿತರಿಸಲಾಗಿದಿಯೇ;

(ಈ) ಬೋರ್‌ವೆಲ್ ಕೊರೆಯಿಸಿ ಪಂಪ್ ಸೆಟ್ ವಿತರಿಸದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ವಿಳಂಬಕ್ಕೆ ಕಾರಣಗಳೇನು;

(ಉ) ಫಲಾನುಭವಿಗಳ ಆಯ್ಕೆಗೆ ಅನುಸರಿಸಲಾಗುತ್ತಿರುವ ಮಾನದಂಡಗಳೇನು; (ವಿವರಗಳನ್ನು ನೀಡುವುದು) ಆಯ್ದೆ ಸಮಿತಿಯಲ್ಲಿ ಉಪಸ್ಥಿತರಿದ್ದ ಸದಸ್ಯರು ಅಧ್ಯಕ್ಷರು ಯಾರು? (ನಡವಳಿಕೆ ಪ್ರತಿಯನ್ನು ನೀಡುವುದು)

## ಕೊಪ್ಪಳ ಜಿಲ್ಲೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೪ (೧೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ವಸತಿ ನಿಲಯಗಳ ಸಂಖ್ಯೆ ಎಷ್ಟು;

(ಆ) ಸದರಿ ವಸತಿ ಶಾಲೆ, ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಇ) ಪ್ರಸಕ್ತ ಸಾಲಿನಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಸತಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು;



(ಈ) ಆ ಪೈಕಿ ಪರೀಕ್ಷೆಗಳಲ್ಲಿ ಉತ್ತೀರ್ಣರಾದವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಉ) ಪ್ರವೇಶ ಪಡೆಯುವಲ್ಲಿ ಸಫಲರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರವೇಶಕ್ಕಾಗಿ ಬಾಕಿ ಉಳಿದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಊ) ಬಾಕಿ ಉಳಿದಿರುವ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಸರಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರಸಕ್ತ ವರ್ಷದಲ್ಲಿ ಕೊಪ್ಪಳ ಜಿಲ್ಲೆಯ ವೈದ್ಯಕೀಯ ಶಿಕ್ಷಣ ಸಂಸ್ಥೆ ಪ್ರಾರಂಭಿಸಿರುವುದು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೫ (೧೪೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ವರ್ಷದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ವೈದ್ಯಕೀಯ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಲಾಗಿದೆಯೇ;

(ಆ) ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಿದ್ದಲ್ಲಿ ಕಟ್ಟಡವನ್ನು ಯಾವ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗಿದೆ; ಇದಕ್ಕೆ ಸರ್ಕಾರ ಖರ್ಚು ಮಾಡಿದ ಅನುದಾನದ ಮೊತ್ತ ಎಷ್ಟು;

(ಇ) ಸಂಸ್ಥೆಯನ್ನು ಪ್ರಾರಂಭಿಸಿದ್ದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ನೀಡುವುದು;

(ಈ) ಪ್ರಸಕ್ತ ವರ್ಷದಿಂದ ತರಗತಿಗಳು ಪ್ರಾರಂಭವಾಗುತ್ತಿವೆಯೇ? (ಮಾಹಿತಿ ನೀಡುವುದು)

## ನೆಸ್ಲೆ ಕಂಪನಿ ವಿರುದ್ಧ ಕೈಗೊಂಡ ಕ್ರಮ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೬ (೧೫೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆಸ್ಲೆ ಕಂಪನಿಯಿಂದ ತಯಾರಿಸುವ ಮ್ಯಾಗಿ ನೂಡಲ್ಸ್‌ನಲ್ಲಿ ವಿಷಕಾರಿ ಎಂ.ಎಸ್.ಜಿ (ಮೋನೋ ಸೋಡಿಯಂ ಗ್ಲುಟಮೇಟ್) ಅಂಶ ಪತ್ತೆಯಾಗಿರುವ ವಿಷಯವು ಸರ್ಕಾರದ ಗಮನಕ್ಕಿದೆಯೇ; ಇದ್ದಲ್ಲಿ ಈ ನಿಟ್ಟಿನಲ್ಲಿ ನೆಸ್ಲೆ ಕಂಪನಿಯ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಸರ್ಕಾರವು ಮ್ಯಾಗಿ ನೂಡಲ್ಸ್ ಬಳಸದಂತೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆಯೇ;

(ಇ) ಸೂಚಿಸಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿಶೇಷ ತಂಡಗಳನ್ನು ಸರ್ಕಾರವು ನೇಮಿಸಲಾಗಿದೆಯೇ? (ವಿವರ ಒದಗಿಸುವುದು)

## ಡಾ: ಡಿ.ಎಂ. ನಂಜುಂಡಪ್ಪ ವರದಿ ಅನ್ವಯ ಹೈದ್ರಬಾದ್– ಕರ್ನಾಟಕ (ಎಸ್.ಡಿ.ಪಿ) ಅಡಿಯಲ್ಲಿ ಬಿಡುಗಡೆಯಾದ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೭ (೧೫೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಡಿ.ಎಂ. ನಂಜುಂಡಪ್ಪ ವರದಿಯ ಅನ್ವಯ ೨೦೦೯–೧೦, ೨೦೧೦–೧೧, ೨೦೧೧–೧೨, ೨೦೧೨–೧೩, ೨೦೧೩–೧೪, ೨೦೧೪–೧೫ನೇ ಸಾಲಿನವರೆಗೆ ಹಿಂದುಳಿದ ಹೈದ್ರಬಾದ್–ಕರ್ನಾಟಕ ಪ್ರದೇಶಗಳ ಆರು ಜಿಲ್ಲೆಗಳಿಗೆ ಬಿಡುಗಡೆಯಾದ ವಿಶೇಷ ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಅಡಿಯಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ವರ್ಷವಾರು, ಇಲಾಖಾವಾರು, ಯೋಜನೆವಾರು, ವಿಶೇಷ ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಜಿಲ್ಲಾವಾರು ಮಾಹಿತಿ ನೀಡುವುದು);

(ಆ) ಮೇಲ್ಕಾಣಿಸಿದ ವಿಶೇಷ ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಅಡಿಯಲ್ಲಿ ೨೦೦೯ ಇಲ್ಲಿಯವರೆಗೆ ಆದ ಖರ್ಚು ಎಷ್ಟು? (ವರ್ಷವಾರು, ಇಲಾಖಾವಾರು, ಯೋಜನೆವಾರು, ವಿಶೇಷ ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಜಿಲ್ಲಾವಾರು ಮಾಹಿತಿ ನೀಡುವುದು ;



## ಗಂಗಾ ಕಲ್ಯಾಣ ಯೋಜನೆಯಡಿ ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಕೊರೆದಿರುವ ಕೊಳವೆ ಬಾವಿಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೮೮ (೧೫೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೦೧–೦೫–೨೦೧೩ ರಿಂದ ೩೧–೦೫–೨೦೧೫ ರವರೆಗೆ ಗಂಗಾ ಕಲ್ಯಾಣ ಯೋಜನೆಯಡಿ ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕೊರೆದಿರುವ ಕೊಳವೆ ಬಾವಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕೊರೆದಿರುವ ಕೊಳವೆ ಬಾವಿಗಳಿಗೆ ವೆಚ್ಚ ಮಾಡಿರುವ ಹಣ ಎಷ್ಟು; ಇವುಗಳಲ್ಲಿ ಎಷ್ಟು ಕೊಳವೆ ಬಾವಿಗಳು ವಿಫಲವಾಗಿವೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇವುಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಮತ್ತು ಕಲ್ಪಿಸದಿರುವ ಕೊಳವೆ ಬಾವಿಗಳೆಷ್ಟು;

(ಈ) ವಿದ್ಯುತ್ ಸಂಪರ್ಕ ಕಲ್ಪಿಸದಿರಲು ಕಾರಣಗಳೇನು; ಯಾವಾಗ ಕಲ್ಪಿಸಲಾಗುವುದು; ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಬೆಳಗಾವಿ ನಗರಕ್ಕೆ ಜಯದೇವ ಆಸ್ಪತ್ರೆ ತೆರೆಯುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೮೯ (೧೫೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದಲ್ಲಿರುವ ಜಿಲ್ಲೆಗಳಿಗೆ ಅನುಕೂಲವಾಗುವಂತೆ ಹೃದ್ರೋಗ ಜಯದೇವ ಆಸ್ಪತ್ರೆ ತೆರೆಯಲು ಸರ್ಕಾರ ನಿರ್ಧರಿಸಿದೆಯೇ;

(ಆ) ಈ ವಿಭಾಗದ ಎಲ್ಲಾ ಜಿಲ್ಲೆಗಳ ಹೃದ್ರೋಗ ರೋಗಿಗಳಿಗೆ ಈಗ ಹಾಲಿ ಇರುವ ಸವಲತ್ತುಗಳೇನು;

(ಇ) ಬೆಂಗಳೂರಿಗೆ ಬಂದು ಬಡರೋಗಿಗಳಿಗೆ ಚಿಕಿತ್ಸೆ ಪಡೆದು ಹೋಗಲು ಹಣಕಾಸು ತೊಂದರೆ ಆಗುವುದು ಸರ್ಕಾರ ಗಮನಿಸಿದೆಯೇ;

(ಈ) ಈ ಭಾಗದ ಜನತೆಯ ಕೋರಿಕೆ ಮೇರೆಗೆ ಸರ್ಕಾರ ಕ್ರಮ ಕೈಗೊಂಡು ಬೆಳಗಾವಿಯಲ್ಲಿ ಹೃದ್ರೋಗ ಜಯದೇವ ಆಸ್ಪತ್ರೆ ತೆರೆಯುವುದೇ?



## ಬೆಳಗಾವಿ ವಿಭಾಗದ ಜಿಲ್ಲೆಗಳಲ್ಲಿ ಅಂಬೇಡ್ಕರ್ ಭವನ ನಿರ್ಮಾಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೦ (೧೫೫೫) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗ ಹಾಗೂ ಕಲಬುರಗಿ ವಿಭಾಗಕ್ಕೆ ಮಂಜೂರಾಗಿರುವ ಅಂಬೇಡ್ಕರ್ ಭವನಗಳೆಷ್ಟು; (ವಿವರ ಒದಗಿಸುವುದು)

(ಆ) ಸದರಿ ಭವನಗಳ ಕಟ್ಟಡ ಕಾಮಗಾರಿ ಪ್ರಾರಂಭಗೊಂಡಿದೆಯೇ; ಹಾಗಿದ್ದಲ್ಲಿ, ಕಾಮಗಾರಿಯ ಪ್ರಗತಿ ಬಗ್ಗೆ ವಿವರ ನೀಡುವುದು; ಸದರಿ ಕಾಮಗಾರಿಗೆ ಬಿಡುಗಡೆಯಾದ ಹಣ ಎಷ್ಟು; ಆ ಪೈಕಿ ಖರ್ಚಾದ ಮೊತ್ತ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಅಂಬೇಡ್ಕರ್ ಭವನ ಕಟ್ಟಲು ಸ್ಥಳ ಗುರುತಿಸದೆ ಅರ್ಜಿ ಆಧಾರದ ಮೇಲೆ ಮಂಜೂರಾತಿ ನೀಡಿ ಸ್ಥಳ ಇಲ್ಲದಿರುವುದು ಎಷ್ಟು; ಇದಕ್ಕೆ ಕಾರಣಗಳೇನು;

(ಈ) ಮಂಜೂರಾಗಿರುವ ಅಂಬೇಡ್ಕರ್ ಭವನಗಳನ್ನು ಪೂರ್ಣ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು?

## ಬೆಳಗಾವಿ ವಿಭಾಗಕ್ಕೆ ನೀಡಿರುವ ಗಂಗಾ ಕಲ್ಯಾಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೧ (೧೫೫೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರುಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗಕ್ಕೆ ಹಿಂದುಳಿದ ವರ್ಗಗಳ ಇಲಾಖೆಯಿಂದ ಕಳೆದ ಎರಡು ವರ್ಷಗಳಲ್ಲಿ ಮಂಜೂರಾಗಿರುವ ಗಂಗಾ ಕಲ್ಯಾಣ ಕೊಳವೆ ಬಾವಿಗಳೆಷ್ಟು; ಎಲ್ಲೆಲ್ಲಿ;

(ಆ) ಆ ಪೈಕಿ ಕೊರೆಸಲಾಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; ಸಂಪರ್ಕ ಕಲ್ಪಿಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

(ಇ) ಇದುವರೆವಿಗೂ ಕೊರೆಸದೆ ಇರುವ ಬೋರ್‌ವೆಲ್‌ಗಳೆಷ್ಟು; ಇದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಈ) ಬೆಳಗಾವಿ ವಿಭಾಗದಲ್ಲಿ ಬರುವ ಎಲ್ಲಾ ತಾಲ್ಲೂಕುಗಳಿಗೆ ಈ ವರ್ಷ ನಿರ್ಧರಿಸಿರುವ ಗಂಗಾ ಕಲ್ಯಾಣ ಕೊಳವೆ ಬಾವಿಗಳ ಸಂಖ್ಯೆ ಎಷ್ಟು? (ಪೂರ್ಣ ಮಾಹಿತಿ ನೀಡುವುದು)

## ಬೆಳಗಾವಿ ವಿಭಾಗದ ಸ್ವಯಂ ಉದ್ಯೋಗ ಸಾಲ ಯೋಜನೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ):–**

೯೨ (೧೫೭) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದ ಜಿಲ್ಲೆಗಳಿಂದ ಸ್ವಯಂ ಉದ್ಯೋಗ ಸಾಲ ಯೋಜನೆ ಅಡಿಯಲ್ಲಿ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ಪ್ರತಿ ತಾಲ್ಲೂಕಿಗೆ ನಿಗದಿಪಡಿಸಿರುವ ಗುರಿ ಎಷ್ಟು;

(ಇ) ಹಾಗಿದ್ದಲ್ಲಿ, ಬೇಡಿಕೆಗೆ ತಕ್ಕಂತೆ ಗುರಿ ಇಡದಿರಲು ಕಾರಣವೇನು;

(ಈ) ಸದರಿ ಅರ್ಜಿಗಳಿಗೆ ಎಷ್ಟು ವರ್ಷದಲ್ಲಿ ಬೇಡಿಕೆ ಈಡೇರಿಸಲಾಗುವುದು ?



## ಬೆಳಗಾವಿ ವಿಭಾಗದ ಜಿಲ್ಲೆಗಳಿಗೆ ಹೊಸ ಯೋಜನೆಗಳು ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೯೩ (೧೫೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದ ಜಿಲ್ಲೆಗಳಿಗೆ ಸರ್ಕಾರದಿಂದ ಹೊಸದಾಗಿ ಯೋಜಿಸಲಾಗಿರುವ ಯೋಜನೆಗಳಾವುವು ;

(ಆ) ಈ ವಿಭಾಗದ ಜಿಲ್ಲೆಗಳಿಂದ ಅನೇಕ ವರ್ಷಗಳಿಂದ ಮೂಲಭೂತ ಸೌಕರ್ಯಗಳಿಗಾಗಿ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಜನರ ಅಪೇಕ್ಷೆಗೆ ತಕ್ಕಂತೆ ಈ ಜಿಲ್ಲೆಗಳಿಗೆ ಅನುಕೂಲವಾಗುವಂತಹ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ ;

(ಈ) ರೂಪಿಸಿದ್ದಲ್ಲಿ, ಯೋಜನೆಗಳ ವಿವರ ನೀಡುವುದು ; ಸದರಿ ಯೋಜನೆಗಳನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಮೈಸೂರು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿ ವೇತನ ಬಾಕಿ ಇರುವುದು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೯೪ (೧೫೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸದರಿ ವಿದ್ಯಾರ್ಥಿಗಳಿಗೆ ತಲಾ ನೀಡಲಾಗುತ್ತಿರುವ ಮಾಸಿಕ ವಿದ್ಯಾರ್ಥಿ ವೇತನದ ಮೊತ್ತವೆಷ್ಟು ;

(ಇ) ವಿದ್ಯಾರ್ಥಿ ವೇತನ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ತಿಂಗಳುಗಳಿಂದ ವಿದ್ಯಾರ್ಥಿ ವೇತನ ನೀಡಬೇಕಾಗಿದೆ ;

(ಈ) ಈ ವಿಳಂಬಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಬಾಕಿ ವಿದ್ಯಾರ್ಥಿ ವೇತನ ಪಾವತಿಸಲಾಗುವುದು ?

## ರಾಯಚೂರು ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜಿನ ಆಸ್ಪತ್ರೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೫ (೧೬೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದ ಸರ್ಕಾರಿ ಮೆಡಿಕಲ್ ಕಾಲೇಜಿನ ಆಸ್ಪತ್ರೆಯಲ್ಲಿ (RIMS) ಪ್ರಸ್ತುತ ಇರುವ ಹಾಸಿಗೆಗಳ ಸಂಖ್ಯೆ ಎಷ್ಟು ;



(ಆ) ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರುಗಳ ಸಂಖ್ಯೆ ಎಷ್ಟು ;

(ಇ) ಪೂರ್ಣ ಪ್ರಮಾಣದಲ್ಲಿ ಆಸ್ಪತ್ರೆಯನ್ನು ಅಭಿವೃದ್ಧಿ ಪಡಿಸಲು ತೆಗೆದುಕೊಂಡಿರುವ ಕ್ರಮವೇನು ?

## ಕಾರ್ಡ್‌ದಾರರಿಗೆ ಒದಗಿಸಲಾಗುತ್ತಿರುವ ಆಹಾರ ಧಾನ್ಯಗಳ ಪ್ರಮಾಣ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೬ (೧೬೪) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಬಿ.ಪಿ.ಎಲ್. ಕಾರ್ಡ್‌ದಾರರ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ಈವರೆವಿಗೆ ಒದಗಿಸುತ್ತಿರುವ ಆಹಾರ ಧಾನ್ಯಗಳ ಪ್ರಮಾಣಗಳೆಷ್ಟು ;

(ಇ) ಎ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಹಾಗೂ ಅವರಿಗೆ ನೀಡುತ್ತಿರುವ ಆಹಾರ ಧಾನ್ಯಗಳ ಪ್ರಮಾಣವೆಷ್ಟು ;

(ಈ) ರಾಯಚೂರು ಜಿಲ್ಲೆಯಲ್ಲಿರುವ ಪಡಿತರ ಅಂಗಡಿಗಳ ಒಟ್ಟು ಸಂಖ್ಯೆ ಎಷ್ಟು ; ನೂತನವಾಗಿ ಕಾರ್ಡ್‌ಗಳ ಅನುಗುಣವಾಗಿ ಪಡಿತರ ಅಂಗಡಿಗಳನ್ನು ಮಂಜೂರಾತಿ ಮಾಡಲು ತೆಗೆದು ಕೊಂಡಿರುವ ಕ್ರಮಗಳೇನು ?

## ಹೈದರಾಬಾದ್–ಕರ್ನಾಟಕದಲ್ಲಿ NEKSRTC ಬಸ್‌ಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೭ (೧೬೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕದಲ್ಲಿ NEKSRTC ಸಾರಿಗೆ ಬಸ್‌ಗಳಲ್ಲಿ ೮ ಲಕ್ಷ ಕಿ.ಮೀ. ಮೀರಿ ಪ್ರಯಾಣಿಸಿರುವ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿ ೮ ಲಕ್ಷ ಕಿ.ಮೀ. ಪ್ರಯಾಣಿಸಿರುವ ಸಾರಿಗೆ ಬಸ್ಸುಗಳನ್ನು Scrap ಮಾಡಿ ಅದರ ಬದಲು ನೂತನ ಬಸ್ಸುಗಳನ್ನು ಖರೀದಿಸಿರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಮಾನ್ವಿ ಪಟ್ಟಣದಲ್ಲಿ ಹೊಸ ಸಾರಿಗೆ ಡಿಪೋ ನಿರ್ಮಿಸಲು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹೊಸದಾಗಿ ಡಿಪೋ ನಿರ್ಮಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು ?

## ಮಾನ್ವಿ ತಾಲ್ಲೂಕಿನಲ್ಲಿ ಕೊರತೆಯಿರುವ ವಸತಿ ಶಾಲೆಯ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮ (೧೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ರಾಯಚೂರು ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನೂತನವಾಗಿ ಮಂಜೂರಾತಿ ನೀಡಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ;



(ಆ) ವಸತಿ ಶಾಲೆಗಳ ಕೊರತೆ ಬಗ್ಗೆ ಇಲಾಖೆಯಿಂದ ಬಂದಿರುವ ಬೇಡಿಕೆಯನ್ನು ಈಡೇರಿಸಲು ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೩ ರಿಂದ ೨೦೧೫ ರವರೆಗೆ ರಾಯಚೂರು ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಮಂಜೂರಾತಿ ಮಾಡಿರುವ ವಿವಿಧ ಯೋಜನೆಗಳು ಯಾವುವು ? (ವಿವರ ನೀಡುವುದು)

## ಡಾ: ಡಿ.ಎಂ. ನಂಜುಂಡಪ್ಪನವರ ವರದಿಯ ಅನುಷ್ಠಾನ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯ (೧೬೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಡಿ.ಎಂ. ನಂಜುಂಡಪ್ಪ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕಳೆದ ಎಂಟು ವರ್ಷಗಳಲ್ಲಿ ಸುಮಾರು ೧೫ ಸಾವಿರ ಕೋಟಿ ರೂ.ಗಳು ವೆಚ್ಚ ಮಾಡಿದ್ದು ಅಭಿವೃದ್ಧಿಯ ಮೌಲ್ಯಮಾಪನ ಮಾಡುವುದಕ್ಕೆ ತೆಗೆದುಕೊಂಡಿರುವ ಕ್ರಮವೇನು ; ಹಾಗೂ ಅಧಿಕೃತವಾಗಿ ವರದಿ ಲಭ್ಯವಾಗುವುದು ಯಾವಾಗ ;

(ಆ) ಹೈದರಾಬಾದ್–ಕರ್ನಾಟಕಕ್ಕೆ ಸೇರಿರುವ ೨೧ ತಾಲ್ಲೂಕುಗಳು ಡಾ: ಡಿ.ಎಂ. ನಂಜುಂಡಪ್ಪ ವರದಿಯಲ್ಲಿ ಅತ್ಯಂತ ಹಿಂದುಳಿದ ತಾಲ್ಲೂಕುಗಳಾಗಿ ಗುರುತಿಸಲಾಗಿದ್ದು, ಸದರಿ ವರದಿಯ

ಅನುಗುಣವಾಗಿ, ಈ ತಾಲ್ಲೂಕುಗಳಿಗೆ ವಿವಿಧ ಇಲಾಖೆಗಳ ಮುಖಾಂತರ ಇಲ್ಲಿಯವರೆಗೂ ಮಾಡಿರುವ ವೆಚ್ಚ ಎಷ್ಟು ; (ಯೋಜನಾವಾರು ಅಭಿವೃದ್ಧಿಯ ವಿವರ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ಸದರಿ ತಾಲ್ಲೂಕುಗಳಲ್ಲಿ ವಿವಿಧ ಇಲಾಖೆಗಳಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ?

## ರಾಜ್ಯದಲ್ಲಿರುವ ಎ.ಪಿ.ಎಲ್ ಪಡಿತರದಾರರು ಹಾಗೂ ಪ್ರತಿ ಕುಟುಂಬಕ್ಕೆ ನೀಡುತ್ತಿರುವ ಅಕ್ಕಿಯ ಪ್ರಮಾಣ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦ (೧೬೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎ.ಪಿ.ಎಲ್. ಪಡಿತರದಾರರೆಷ್ಟು ; ಎಪಿಎಲ್ ಪಡಿತರದಾರರಿಗೆ ತಿಂಗಳಿಗೆ ಪ್ರತಿ ವ್ಯಕ್ತಿ ಅಥವಾ ಪ್ರತಿ ಕುಟುಂಬಕ್ಕೆ ನೀಡುತ್ತಿರುವ ಅಕ್ಕಿ ಪ್ರಮಾಣವೆಷ್ಟು ; ಮತ್ತು ಪ್ರತಿ ಕೆ.ಜಿ. ಅಕ್ಕಿಯ ದರವೆಷ್ಟು ;

(ಆ) ಎಪಿಎಲ್ ಪಡಿತರದಾರರಿಗೆ ಪ್ರತಿ ಕುಟುಂಬಕ್ಕೆ ಎಷ್ಟು ಪ್ರಮಾಣದ ಗೋಧಿ ನೀಡಲಾಗುತ್ತಿದೆ ; ಗೋಧಿಯ ದರವೆಷ್ಟು ;

(ಇ) ಸೀಮೆಎಣ್ಣೆ ವಿತರಣೆಯಲ್ಲಿ ನಡೆದಿರುವ ಕಳ್ಳತನದ ಪ್ರಕರಣದ ಬಗ್ಗೆ ೨೦೧೪ ರಿಂದ ಇಲ್ಲಿಯವರಿಗೆ ಎಷ್ಟು ಜನರ ವಿರುದ್ಧ ಮೊಕದ್ದಮೆ ದಾಖಲಾಗಿದೆ ; ಕಳ್ಳತನ ಪ್ರಕರಣದಲ್ಲಿ ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆ ಅಧಿಕಾರಿಗಳು ಶಾಮೀಲಾಗಿರುವರೇ ; (ಪ್ರಕರಣವಾರು ವಿವರ ನೀಡುವುದು)



(ಈ) ಇಂಡಿಯನ್ ಆಯಿಲ್ ಕಾರ್ಪೋರೇಷನ್ ಮುಖೇನ ಸೀಮೆ ಎಣ್ಣೆ ಟ್ಯಾಂಕರ್‌ಗಳಿಗೆ ಜಿಪಿಎಸ್ ಹಾಕಲಾಗಿರುವುದೇ ; ಸೀಮೆ ಎಣ್ಣೆ ಲಾರಿಗಳಿಗೆ ವಿತರಿಸಲು ಇರುವ ನೀತಿ, ನಿಬಂಧನೆಗಳೇನು ;

(ಉ) ಸೀಮೆ ಎಣ್ಣೆ ಪಡೆಯುವ ಫಲಾನುಭವಿಗಳು ಯಾರು ; ಇದಕ್ಕೆ ಇರುವ ಮಾನದಂಡವೇನು ;

(ಊ) ಸೀಮೆ ಎಣ್ಣೆ ಪ್ರತಿ ಲೀಟರ್‌ಗೆ ರಾಜ್ಯ ಸರ್ಕಾರದ ಖರೀದಿಯ ದರವೆಷ್ಟು ; ಮಾರಾಟ ದರವೆಷ್ಟು ; ಇದಕ್ಕೆ ಕೇಂದ್ರ ಸರ್ಕಾರದ ಸಹಾಯ ಧನ ಒದಗಿಸಲಾಗುತ್ತಿದೆಯೇ ? (ವಿವರ ನೀಡುವುದು)

## ಬಯಲು ಸೀಮೆ ಪ್ರದೇಶಾಭಿವೃದ್ಧಿಗೆ ಬರುವ ಜಿಲ್ಲೆಗಳು ಹಾಗೂ ಹಣ ಬಿಡುಗಡೆ ಮಾಡಿರುವ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧ (೧೬೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲುಸೀಮೆ ಪ್ರದೇಶಾಭಿವೃದ್ಧಿಗೆ ಬರುವ ಜಿಲ್ಲೆಗಳು ಯಾವುವು ;

(ಆ) ಬಯಲುಸೀಮೆ ಪ್ರದೇಶಾಭಿವೃದ್ಧಿಗೆ ಮಂಡಳಿಯಿಂದ ರಾಜ್ಯ ಸರ್ಕಾರ ೨೦೧೪–೧೫ ಹಾಗೂ ೨೦೧೫–೧೬ರಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು ;

(ಇ) ಬಿಡುಗಡೆ ಮಾಡಿರುವ ಹಣದಲ್ಲಿ ಯಾವ ಯಾವ ಯೋಜನೆ ರೂಪಿಸಲಾಗಿದೆ ; ಆ ಪೈಕಿ ಅನುಷ್ಠಾನಗೊಂಡಿರುವ ಯೋಜನೆಗಳಾವುವು ;

(ಈ) ಹೈದರಾಬಾದ್–ಕರ್ನಾಟಕ ಪ್ರಾಂತ್ಯಾಭಿವೃದ್ಧಿ ಮಂಡಳಿಗೆ ೨೦೧೩–೧೪ ರಿಂದ ೨೦೧೫–೧೬ನೇ ಸಾಲಿನ ಮುಂಗಡ ಪತ್ರದಲ್ಲಿ ಅಥವಾ ಇತರೆ ಮೂಲಗಳಿಂದ ಬಿಡುಗಡೆ ಮಾಡಿರುವ ಹಣವೆಷ್ಟು ?

## ೨೦೧೪–೧೫ರಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸವಲತ್ತುಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨ (೧೭೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಅಧ್ಯಯನದ ಯೋಜನೆಗೆ ನಿಗದಿಯಾಗಿದ್ದ ಹಣವೆಷ್ಟು ; ನಿಗದಿಯಾಗಿದ್ದ ಹಣದಲ್ಲಿ ರೂಪಿಸಿರುವ ಯೋಜನೆಗಳೇನು ; ಇದರ ಫಲಾನುಭವಿಗಳು ಪಡೆದಿರುವ ಸವಲತ್ತುಗಳು ಯಾವುವು ;

(ಆ) ಸಾಮಾಜಿಕ ವಲಯ, ಶೈಕ್ಷಣಿಕ ವಲಯ ಮತ್ತು ಆರ್ಥಿಕ ಅಭ್ಯುದಯ ಫಲಾನುಭವಿಗಳು ಯಾರು ; (ಜಿಲ್ಲಾವಾರು, ಫಲಾನುಭವಿಗಳವಾರು ವಿವರ ನೀಡುವುದು)



(ಇ) ರಾಜ್ಯಾದ್ಯಂತ ಮಹರ್ಷಿ ವಾಲ್ಮೀಕಿ ಭವನ ನಿರ್ಮಾಣ ಮಾಡಲು ಬಿಡುಗಡೆ ಮಾಡಿರುವ ಹಣವೆಷ್ಟು ; ಎಲ್ಲೆಲ್ಲಿ ಭವನ ನಿರ್ಮಾಣ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಉಪ ಪ್ರಾದೇಶಿಕ ಕೇಂದ್ರಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩ (೧೭೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಉಪ ಪ್ರಾದೇಶಿಕ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ; ಪ್ರಾರಂಭಗೊಂಡಿದ್ದು ಯಾವಾಗ ;

(ಆ) ಪ್ರೌಢಶಾಲೆಗಳಲ್ಲಿ ರೋಬೋಟ್ ಆಧಾರಿತ ಶಿಕ್ಷಣ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ರೋಬೋಟ್ ಶಿಕ್ಷಣ ಪ್ರಾಯೋಗಿಕ ಯೋಜನೆಯನ್ನು ಕೊರಿಯಾ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ & ಟೆಕ್ನಾಲಜಿಯ ಘಟಕವಾದ ಇಂಡೋ ಕೋರಿಯಾ ಸೈನ್ಸ್ ಮತ್ತು ಟೆಕ್ನಾಲಜಿ ಸೆಂಟರ್‌ನ (IKST) ಸಹಯೋಗದೊಂದಿಗೆ ಪ್ರಾರಂಭಿಸಲಾಗಿದೆಯೇ ; ಪ್ರಾರಂಭಿಸಿದ್ದರೆ, ಎಲ್ಲೆಲ್ಲಿ ಪ್ರಾರಂಭಿಸಲಾಗಿದೆ ? (ವಿವರ ನೀಡುವುದು)

## ಮೈಸೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪ (೧೨೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಸ್ಥಾಪನೆ ಕಾರ್ಯ ಯಾವ ಹಂತದಲ್ಲಿದೆ ; ಇದಕ್ಕಾಗಿ ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಮಂಜೂರು ಮಾಡಿದ ಹಾಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಆ) ಈ ಆಸ್ಪತ್ರೆ ನಿರ್ಮಾಣಕ್ಕೆ ಗೊತ್ತುಪಡಿಸಿದ ಜಾಗ ಯಾವುದು ಹಾಗೂ ಅದರ ವಿಸ್ತೀರ್ಣ ಎಷ್ಟು ; ನಿರ್ಮಾಣ ಕಾರ್ಯದ ಪ್ರಗತಿ ಯಾವ ಹಂತದಲ್ಲಿದೆ ; ಯಾವಾಗ ಪೂರ್ಣಗೊಳ್ಳಲಿದೆ ; ಸಾರ್ವಜನಿಕ, ಸೇವೆಗೆ ಯಾವಾಗ ದೊರಕಲಿದೆ ? (ವಿವರಗಳನ್ನು ಒದಗಿಸುವುದು)

## ಚಾಮರಾಜನಗರ ಜಿಲ್ಲೆಯಲ್ಲಿರುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಡಿಪೋಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫ (೧೨೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಡಿಪೋಗಳ ಸಂಖ್ಯೆ ಎಷ್ಟು ; ಅವು ಯಾವುವು ; ಈ ಡಿಪೋಗಳಲ್ಲಿರುವ ವಿವಿಧ ದರ್ಜೆಯ ಬಸ್‌ಗಳ ಸಂಖ್ಯೆ ಎಷ್ಟು ; (ವೋಲ್ವೋ, ರಾಜಹಂಸ, ಆರ್ಡಿನರಿ ಇತ್ಯಾದಿ) ಇವುಗಳಲ್ಲಿ ಸುಸ್ಥಿತಿಯಲ್ಲಿರುವ ಬಸ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)



(ಆ) ಪ್ರಸಕ್ತ ವರ್ಷದಲ್ಲಿ ಈ ಡಿಪೋಗಳಿಗೆ ಹೆಚ್ಚುವರಿ ಬಸ್‌ಗಳನ್ನು ಒದಗಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; ಎಷ್ಟು ಹೊಸ ಬಸ್‌ಗಳನ್ನು ಯಾವ ಯಾವ ಡಿಪೋಗಳಿಗೆ ಒದಗಿಸಲಾಗುವುದು ;

(ಇ) ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಿಗೆ ಬಸ್‌ಗಳನ್ನು ಬಿಡುವ ವ್ಯವಸ್ಥೆ ಮಾಡಬೇಕೆಂದು ಶಾಸಕರಿಂದ, ಸಾರ್ವಜನಿಕರಿಂದ ಸಂಘ ಸಂಸ್ಥೆಗಳಿಂದ ಮನವಿಗಳು ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಚಾಮರಾಜನಗರದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬ (೧೨೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಯ ಕಾರ್ಯ ಯಾವ ಹಂತದಲ್ಲಿದೆ ; ಕಟ್ಟಡ ನಿರ್ಮಾಣಕ್ಕೆ ಮಂಜೂರು ಮಾಡಿ ಬಿಡುಗಡೆ ಮಾಡಿರುವ ಆಯವ್ಯಯ ಎಷ್ಟು ; ಕಟ್ಟಡ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ ; ಯಾವಾಗ ಪೂರ್ಣಗೊಳ್ಳಲಿದೆ ;

(ಆ) ಈ ಕಾಲೇಜಿನ ಪ್ರಾರಂಭಕ್ಕೆ ಐ.ಎವಚ್.ಸಿ. ಅನುಮತಿ ದೊರಕಿದೆಯೇ ; ನಿಗದಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಎಷ್ಟು ; ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಈ ಕಾಲೇಜಿಗೆ ಪ್ರವೇಶ ಅವಕಾಶ ಕಲ್ಪಿಸಿ ಸಿ.ಇ.ಟಿ., ಮೂಲಕ ಸೀಟು ಹಂಚಿಕೆ ಮಾಡಲಾಗುವುದೇ ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂಗಳೂರು–59/ಕಾ.ಸೂ.03566 / 800 ಪ್ರತಿಗಳು/25–06–15